# ಕರಾವಳಿ ಸುದ್ದಿ

ಅರಿವಿನತ್ತ ನಮ್ಮ ಚಿತ್ತ

KARAVALI SUDDI
ENGLISH-KANNADA WEEKLY

ವಾರ ಪತ್ರಿಕೆ

Vol: 12 Issue: 10 KARBIL/2015/62120 DAKSHINA KANNADA 27 JULY 02 AUGUST 2026 Rs 10/-


ನಿನ್ನ ವಿರೋಧವಾಗಿ ರೂಪಿಸಲ್ಪಟ್ಟ ಆಯುಧಗಳು ಸಫಲವಾಗುವುದಿಲ್ಲ

## ಪ್ರಶ್ನೆಪತ್ರಿಕೆ ಸೋರಿಕೆ ರಾಷ್ಟ್ರದ್ರೋಹದಷ್ಟೇ ಗಂಭೀರ ಕಠಿಣ ಶಿಕ್ಷೆಗೆ ಮೋದಿ ಒತ್ತಾಯ



ನೀಟ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ತೀವ್ರ ಕಳವಳ ವ್ಯಕ್ತಪಡಿಸಿದ್ದು, "ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಗಟ್ಟುವುದು ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಅದು ರಾಷ್ಟ್ರದ ಜವಾಬ್ದಾರಿ" ಎಂದು ಹೇಳಿದ್ದಾರೆ. ಆಡಳಿತಾರೂಢ ಎನ್‌ಡಿಎ ಸಂಸದೀಯ ಪಕ್ಷದ 'ಮಂಗಲ್ ಮಿಲನ್' ಸಭೆಯಲ್ಲಿ ಮಾತನಾಡಿದ ಪ್ರಧಾನಿ, ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾಗುವವರ ವಿರುದ್ಧ ಯಾವುದೇ ರೀತಿಯ ವಿನಾಯಿತಿ ನೀಡಬಾರದು ಎಂದು ಸ್ಪಷ್ಟಪಡಿಸಿದರು. ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಆಟವಾಡುವ ಆರೋಪಿಗಳಿಗೆ ಕಾನೂನಿನಡಿ ಸಾಧ್ಯವಾದಷ್ಟು ಕಠಿಣ ಶಿಕ್ಷೆ ವಿಧಿಸಬೇಕೆಂದು ಸೂಚಿಸಿದರು.

ಸಭೆಯ ಬಳಿಕ ಕೇಂದ್ರ ಸಚಿವ ಕಿರಣ್ ರಿಜಿಜು ಅವರು ಪ್ರಧಾನಿಯವರ ಸಂದೇಶವನ್ನು ಮಾಧ್ಯಮಗಳಿಗೆ ತಿಳಿಸಿದರು. ಪರೀಕ್ಷಾ ಪ್ರಕ್ರಿಯೆಯನ್ನು ಪಾರದರ್ಶಕ, ವಿಶ್ವಾಸಾರ್ಹ ಮತ್ತು ದೋಷರಹಿತವಾಗಿಸಲು ಸರ್ಕಾರ, ಪರೀಕ್ಷಾ ಸಂಸ್ಥೆಗಳು ಹಾಗೂ ಸಂಬಂಧಿತ ಎಲ್ಲ ವಿಭಾಗಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕೆಂದು ಪ್ರಧಾನಿ ಕರೆ ನೀಡಿರುವುದಾಗಿ ಅವರು ಹೇಳಿದರು. ಭವಿಷ್ಯದಲ್ಲಿ ಯಾವುದೇ ರೀತಿಯ ಪ್ರಶ್ನೆಪತ್ರಿಕೆ ಸೋರಿಕೆಗೆ ಅವಕಾಶವಾಗದಂತೆ ಪರಿಣಾಮಕಾರಿ ವ್ಯವಸ್ಥೆ ರೂಪಿಸುವ ಅಗತ್ಯವಿದೆ ಎಂದು ಪ್ರಧಾನಿ ಒತ್ತಿ ಹೇಳಿದ್ದು, ಸಂಸತ್ತಿನ ಕಲಾಪಗಳು ಸುಗಮವಾಗಿ ನಡೆಯುವಂತೆ ಎಲ್ಲ ಪಕ್ಷಗಳ ಸಹಕಾರವೂ ಅಗತ್ಯವೆಂದು ಅಭಿಪ್ರಾಯಪಟ್ಟರು.

## ಅಡಿಕೆ ರೋಗಗಳಿಗೆ ವೈಜ್ಞಾನಿಕ ಪರಿಹಾರ - MIDH ತಿದ್ದುಪಡಿಗೆ ಲೋಕಸಭೆಯಲ್ಲಿ ಕ್ಯಾಪ್ಟನ್ ಬ್ರಿಜೇಶ್ ಚೌಟ ಆಗ್ರಹ

ದಕ್ಷಿಣ ಕನ್ನಡ ಸೇರಿದಂತೆ ಕರಾವಳಿ ಹಾಗೂ ಮಲೆನಾಡು ಭಾಗದ ಅಡಿಕೆ ಬೆಳೆಗಾರರನ್ನು ಕಾಡುತ್ತಿರುವ ಎಲೆ ಚುಕ್ಕಿ, ಹಳದಿ ಎಲೆ ಮತ್ತು ಕೊಳೆ ರೋಗಗಳಿಗೆ ಶಾಶ್ವತ ವೈಜ್ಞಾನಿಕ ಪರಿಹಾರ ಕಲ್ಪಿಸುವ ಜೊತೆಗೆ ಮಿಷನ್ ಫಾರ್ ಇಂಟಿಗ್ರೇಟೆಡ್ ಡೆವಲಪ್‌ಮೆಂಟ್ ಆಫ್ ಹಾರ್ಟಿಕಲ್ಚರ್ (MIDH) ನಿಯಮಾವಳಿಗಳಿಗೆ ತಿದ್ದುಪಡಿ ತರಬೇಕೆಂದು ದಕ್ಷಿಣ ಕನ್ನಡ ಸಂಸದರಾದ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರು ಲೋಕಸಭೆಯಲ್ಲಿ ನಿಯಮ 377ರಡಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು. ಸದನದಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಅಡಿಕೆ ತೋಟಗಳಲ್ಲಿ ಮರುಕಳಿಸುತ್ತಿರುವ ವಿವಿಧ ರೋಗಗಳಿಂದ ರೈತರು ಭಾರೀ ನಷ್ಟ ಅನುಭವಿಸುತ್ತಿದ್ದು, ರೋಗ ನಿರ್ಣಯ, ತೋಟದ ನೈರ್ಮಲ್ಯ, ಪೋಷಕಾಂಶಗಳ ಸಮರ್ಪಕ ಪೂರೈಕೆ, ಸೂಕ್ತ ಒಳಚರಂಡಿ ವ್ಯವಸ್ಥೆ, ನಿರಂತರ ಮೇಲ್ವಿಚಾರಣೆ ಹಾಗೂ ಅಗತ್ಯವಿದ್ದಲ್ಲಿ ಮರುನೆಡುವಿಕೆ (ರೀ-ಪ್ಲಾಂಟೇಷನ್) ಸೇರಿದಂತೆ ಸಮಗ್ರ ವೈಜ್ಞಾನಿಕ ಚಿಕಿತ್ಸಾ ಕ್ರಮಗಳು ಅನಿವಾರ್ಯವಾಗಿವೆ ಎಂದು ಹೇಳಿದರು. ಪ್ರಸ್ತುತ MIDH ಯೋಜನೆಯಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು 60:40 ಅನುಪಾತದಲ್ಲಿ ನೀಡುತ್ತಿರುವ ಆರ್ಥಿಕ ನೆರವು ನಿಗದಿತ ಘಟಕ ವೆಚ್ಚವನ್ನು ಆಧರಿಸಿದ್ದು, ರೋಗದ ತೀವ್ರತೆ ಮತ್ತು ಚಿಕಿತ್ಸೆಯ ನೈಜ ವೆಚ್ಚವನ್ನು ಭರಿಸಲು ಅದು ಸಾಕಾಗುತ್ತಿಲ್ಲ ಎಂದು ಅವರು ಗಮನ ಸೆಳೆದರು. ಈ ಹಿನ್ನೆಲೆಯಲ್ಲಿ ಸೆಂಟ್ರಲ್ ಪ್ಲಾಂಟೇಷನ್ ಕ್ರಾಪ್ಸ್ ರಿಸರ್ಚ್ ಇನ್‌ಸ್ಟಿಟ್ಯೂಟ್ (CPCRI) ನೇತೃತ್ವದಲ್ಲಿ, ಡೈರೆಕ್ಟರೇಟ್ ಆಫ್ ಅರೆಕಾನಟ್ ಅಂಡ್ ಸ್ಪೈಸಸ್ ಡೆವಲಪ್‌ಮೆಂಟ್ (DASD), ಭಾರತೀಯ ಕೃಷಿ ಸಂಶೋಧನಾ ಮಂಡಳಿ (ICAR), ರಾಜ್ಯ ಸರ್ಕಾರಗಳು ಹಾಗೂ ಬೆಳೆಗಾರರ ಸಂಘಟನೆಗಳ ಸಹಯೋಗದಲ್ಲಿ ನಿಗದಿತ ಅವಧಿಯೊಳಗೆ ರೋಗ ನಿಯಂತ್ರಣ ವೆಚ್ಚ ಹಾಗೂ ಚಿಕಿತ್ಸಾ ಕ್ರಮಗಳ ಕುರಿತು ಸಮಗ್ರ ವೈಜ್ಞಾನಿಕ ಅಧ್ಯಯನ ಕೈಗೊಳ್ಳಬೇಕೆಂದು ಸಂಸದರು ಆಗ್ರಹಿಸಿದರು.

ಅಧ್ಯಯನದಲ್ಲಿ ರೋಗದ ಹಂತವಾರು ಚಿಕಿತ್ಸೆ, ಪ್ರತಿ ಹೆಕ್ಟೇರ್‌ಗೆ ತಗುಲುವ ಔಷಧ, ಗೊಬ್ಬರ, ಕೂಲಿ, ರೋಗ ನಿರ್ಣಯ ವೆಚ್ಚ, ಮರುನೆಡುವಿಕೆ ಅಗತ್ಯತೆ ಹಾಗೂ ಫಲಾನುಭವಿಗಳ ಆಯ್ಕೆ ಮಾನದಂಡಗಳನ್ನು ವೈಜ್ಞಾನಿಕವಾಗಿ ನಿರ್ಧರಿಸಬೇಕು ಎಂದು ಅವರು ಸಲಹೆ ನೀಡಿದರು. ಅಲ್ಲದೆ, ಅಧ್ಯಯನ ವರದಿಯ ಆಧಾರದ ಮೇಲೆ MIDH



ನಿಯಮಾವಳಿಗಳಿಗೆ ತಿದ್ದುಪಡಿ ತಂದು ತೋಟಗಾರಿಕಾ ಬೆಳೆಗಳಿಗೆ ರೋಗ-ಆಧಾರಿತ ಪ್ರತ್ಯೇಕ ಘಟಕ (Disease-Specific Component) ರೂಪಿಸಬೇಕು. ವಿಶೇಷವಾಗಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಆದ್ಯತೆ ನೀಡಿ, ಒಂದೇ ಬಾರಿಯ ಸಹಾಯಧನದ ಬದಲಿಗೆ ರೋಗ ನಿರ್ಣಯ, ತಾಂತ್ರಿಕ ಮಾರ್ಗದರ್ಶನ ಹಾಗೂ ಹಂತ ಹಂತವಾಗಿ ಚಿಕಿತ್ಸೆ ನೀಡುವ ವ್ಯವಸ್ಥೆ ಜಾರಿಯಾಗಬೇಕು ಎಂದು ಒತ್ತಾಯಿಸಿದರು. ರಾಜ್ಯದ ಮುಂದಿನ ವಾರ್ಷಿಕ ಕಾರ್ಯಯೋಜನೆ ಅಂತಿಮಗೊಳ್ಳುವ ಮುನ್ನವೇ ಈ ಅಧ್ಯಯನ ಪೂರ್ಣಗೊಳಿಸಿ, ಕರಡು ನಿಯಮಾವಳಿ ಹಾಗೂ ಅಂತಿಮ ನಿರ್ಧಾರಗಳನ್ನು ಸಾರ್ವಜನಿಕವಾಗಿ ಪ್ರಕಟಿಸಬೇಕೆಂದು ಅವರು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದರು.

ಕೇಂದ್ರ ಕೃಷಿ ಸಚಿವರಿಗೆ ಪತ್ರ: ಇದಕ್ಕೂ ಮುನ್ನ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದಿದ್ದ ಕ್ಯಾ. ಬ್ರಿಜೇಶ್ ಚೌಟ, MIDH ಯೋಜನೆಯ ವೆಚ್ಚ ಮಿತಿಗೆ ವಿಶೇಷ ವಿನಾಯಿತಿ ನೀಡಿ ಅಡಿಕೆ ಬೆಳೆಗಾರರಿಗೆ ಸಮಗ್ರ ನೆರವು ಪ್ಯಾಕೇಜ್ ಘೋಷಿಸುವಂತೆ ಮನವಿ ಮಾಡಿದ್ದರು. ಜೊತೆಗೆ ಎಲೆ ಚುಕ್ಕಿ ರೋಗ ನಿಯಂತ್ರಣಕ್ಕೆ ಈ ಹಿಂದೆ ಬಿಡುಗಡೆಯಾಗಿದ್ದ ಅನುದಾನವನ್ನು ಮರುಬಿಡುಗಡೆ ಮಾಡುವಂತೆ ಕೋರಿದ್ದರು. ಹಳದಿ ಎಲೆ ರೋಗದಿಂದ ದಕ್ಷಿಣ ಕನ್ನಡ, ಚಿಕ್ಕಮಗಳೂರು, ಕೊಡಗು ಸೇರಿದಂತೆ ಸುಮಾರು 16 ಸಾವಿರ ಹೆಕ್ಟೇರ್ ಅಡಿಕೆ ತೋಟಗಳು ಬಾಧಿತಗೊಂಡಿರುವ ಹಿನ್ನೆಲೆಯಲ್ಲಿ, ಕೇಂದ್ರ ಕೃಷಿ ಸಚಿವರು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಬೇಕು. ಕೇಂದ್ರ ಕೃಷಿ ಸಚಿವಾಲಯ, ICAR, CPCRI ಹಾಗೂ ರಾಜ್ಯ ಸರ್ಕಾರದ ಸಂಸ್ಥೆಗಳ ಸಮನ್ವಯದೊಂದಿಗೆ ವಿಜ್ಞಾನಿಗಳು ಮತ್ತು ರೈತರೊಂದಿಗೆ ನೇರ ಸಂವಾದ ನಡೆಸಿದರೆ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ನೆರವಾಗಲಿದೆ ಎಂದು ಸಂಸದರು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

## ನಾಗೋರಿ - ಸೋಮೇಶ್ವರ ವಿಕೋಪ ಪ್ರದೇಶಗಳಿಗೆ ಎಸ್.ಎಲ್. ಭೋಜೇಗೌಡ ಭೇಟಿ

ಜನತಾದಳ (ಜಾತ್ಯತೀತ) ಅಧ್ಯಯನ ತಂಡದ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯ ಎಸ್.ಎಲ್. ಭೋಜೇಗೌಡ ಅವರು ದಕ್ಷಿಣ ಕನ್ನಡ ಜಿಲ್ಲೆಯ ನಾಗೋರಿ ಭೂಕುಸಿತ ಹಾಗೂ ಸೋಮೇಶ್ವರ ಕಡಲುಕೊರೆತ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು. ಸಂತ್ರಸ್ತರಿಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಸರ್ಕಾರಕ್ಕೆ ಶಿಫಾರಸು ಮಾಡುವುದಾಗಿ ತಿಳಿಸಿ, ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು. ಮುಂಗಾರು ಮಳೆಯಿಂದ ಉಂಟಾದ ಹಾನಿಯ ಅಧ್ಯಯನಕ್ಕಾಗಿ ರಚಿಸಲಾದ ಜೆಡಿಎಸ್ ಅಧ್ಯಯನ ತಂಡದೊಂದಿಗೆ ಭೇಟಿ ನೀಡಿದ ಭೋಜೇಗೌಡ, ನಾಗೋರಿಯಲ್ಲಿ ಭೂಕುಸಿತದಿಂದ ಸಂಕಷ್ಟಕ್ಕೊಳಗಾದ ಕುಟುಂಬಗಳನ್ನು ಭೇಟಿ ಮಾಡಿ ಸಾಂತ್ವನ ಹೇಳಿದರು. ಸ್ಥಳೀಯ ನಿವಾಸಿಗಳಿಂದ ಸಮಸ್ಯೆಗಳ ಕುರಿತು ಮಾಹಿತಿ ಪಡೆದು, ಅಪಾಯದ ಪ್ರದೇಶಗಳನ್ನು ವೈಜ್ಞಾನಿಕವಾಗಿ ಗುರುತಿಸಿ ಶಾಶ್ವತ ತಡೆಗೋಡೆ, ನೀರು ಹರಿಸುವ ವ್ಯವಸ್ಥೆ ಹಾಗೂ ಭೂಕುಸಿತ ತಡೆ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಬಳಿಕ ಸೋಮೇಶ್ವರದ ಬಟ್ಟಪಾಡಿ ಪ್ರದೇಶಕ್ಕೆ ಭೇಟಿ ನೀಡಿ ತೀವ್ರ ಕಡಲುಕೊರೆತದಿಂದ ಉಂಟಾಗಿರುವ ಹಾನಿಯನ್ನು ಪರಿಶೀಲಿಸಿದರು. ಮನೆಗಳು, ರಸ್ತೆಗಳು ಹಾಗೂ ಸಾರ್ವಜನಿಕ ಆಸ್ತಿಗಳಿಗೆ ಆಗುತ್ತಿರುವ ಹಾನಿಯನ್ನು ವೀಕ್ಷಿಸಿದ ಅವರು, ಕಡಲುಕೊರೆತ ತಡೆಗೆ ಶಾಶ್ವತ ವೈಜ್ಞಾನಿಕ ಯೋಜನೆಗಳನ್ನು ಜಾರಿಗೊಳಿಸಿ, ತಡೆಗೋಡೆ ನಿರ್ಮಾಣ ಹಾಗೂ ಸಮುದ್ರ ಸಂರಕ್ಷಣಾ ಕಾಮಗಾರಿಗಳನ್ನು ವೇಗಗೊಳಿಸುವಂತೆ ಆಗ್ರಹಿಸಿದರು. ಹಾನಿಗೊಳಗಾದ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕೆಂದೂ ಒತ್ತಾಯಿಸಿದರು.



ಬಳಿಕ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಅವರಿಗೆ ಮನವಿ ಸಲ್ಲಿಸಿದ ಅಧ್ಯಯನ ತಂಡ, ನಾಗೋರಿ ಭೂಕುಸಿತ, ಸೋಮೇಶ್ವರ ಕಡಲುಕೊರೆತ ಸೇರಿದಂತೆ ಜಿಲ್ಲೆಯ ವಿವಿಧ ಮಳೆ ಹಾನಿ ಪ್ರದೇಶಗಳ ಸಮಸ್ಯೆಗಳ ಕುರಿತು ಸಮಗ್ರ ವರದಿ ನೀಡಿತು. ಸಾರ್ವಜನಿಕರಿಂದ ಸಂಗ್ರಹಿಸಿದ ಮಾಹಿತಿ ಹಾಗೂ ತುರ್ತು ಪರಿಹಾರ ಕ್ರಮಗಳ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಯಿತು.

ಜಿಲ್ಲಾಧಿಕಾರಿ ದರ್ಶನ್ ಅವರು ಮನವಿ ಸ್ವೀಕರಿಸಿ, ಈಗಾಗಲೇ ಕೈಗೊಂಡಿರುವ ಕ್ರಮಗಳ ಕುರಿತು ಮಾಹಿತಿ ನೀಡಿದರಲ್ಲದೆ, ಉಳಿದಿರುವ ಸಮಸ್ಯೆಗಳಿಗೂ ಆದ್ಯತೆ ನೀಡಿ ಸರ್ಕಾರದ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಜಾಕೆ ಮಾಧವ ಗೌಡ, ಯುವ ಘಟಕ ಜಿಲ್ಲಾಧ್ಯಕ್ಷ ಅಕ್ಷಿತ್ ಸುವರ್ಣ, ಮಹಾಪ್ರಧಾನ ಕಾರ್ಯದರ್ಶಿ ಯೋಗೀಶ್ ಶೆಟ್ಟಿ ಜಪ್ಪು, ಮೀನುಗಾರ ಘಟಕದ ರಾಜ್ಯಾಧ್ಯಕ್ಷ ರತ್ನಾಕರ್ ಸುವರ್ಣ, ಕಾರ್ಯಾಧ್ಯಕ್ಷ ಇಕ್ಬಾಲ್ ಮುಲ್ಕಿ, ಪುಷ್ಪರಾಜನ್, ರತೀಶ್ ಕರ್ಕೇರ, ಪ್ರಕಾಶ್ ಅಸೈಗೋಳಿ, ಭಾರತಿ ಪುಷ್ಪರಾಜನ್ ಸೇರಿದಂತೆ ಪಕ್ಷದ ವಿವಿಧ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

## ಮಂಗಳೂರು ನಗರದಲ್ಲಿ ಸಾಧನೆಗೈದ 147 ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಪ್ರಶಂಸನಾ ಪತ್ರ, ನಗದು ಬಹುಮಾನ ಗೌರವ

ಮಂಗಳೂರು ನಗರದಲ್ಲಿ ಕಳೆದ ಆರು ತಿಂಗಳಲ್ಲಿ ಅಪರಾಧ ತಡೆ, ಸೈಬರ್ ಕ್ರೈಂ ಪತ್ತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ 29 ಪೊಲೀಸ್ ಅಧಿಕಾರಿಗಳು ಹಾಗೂ 118 ಸಿಬ್ಬಂದಿಗೆ ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವತಿಯಿಂದ ಪ್ರಶಂಸನಾ ಪತ್ರ ಹಾಗೂ ನಗದು ಬಹುಮಾನ ನೀಡಿ ಗೌರವಿಸಲಾಗಿದೆ.




ಜುಲಾಯಿ 20ರಂದು ನಡೆದ ವಿಶೇಷ ಕಾರ್ಯಕ್ರಮದಲ್ಲಿ ಮಂಗಳೂರು ಪೊಲೀಸ್ ಆಯುಕ್ತರಾದ ಸುಧೀರ್ ಕುಮಾರ್ ರೆಡ್ಡಿ ಅವರು ಕರ್ತವ್ಯದಕ್ಷತೆ ಮೆರೆದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಈ ಪುರಸ್ಕಾರಗಳನ್ನು ವಿತರಿಸಿದರು.

**ಆರು ತಿಂಗಳ ಸಾಧನೆಯ ಪ್ರಮುಖ ಮುಖ್ಯಾಂಶಗಳು:**

* ಕಳವು ಸೊತ್ತುಗಳ ವಶ: 2026ರಲ್ಲಿ ವರದಿಯಾದ ಕಳವು ಪ್ರಕರಣಗಳಲ್ಲಿ 88 ಪ್ರಕರಣಗಳನ್ನು ಭೇದಿಸಿ, 1.20 ಕೋಟಿ ಮೌಲ್ಯದ ಮಾಲುಗಳನ್ನು ವಶಪಡಿಸಿಕೊಳ್ಳಲಾಗಿದೆ.
* ದೀರ್ಘಕಾಲದ ಪ್ರಕರಣಗಳ (LPC) ಆರೋಪಿಗಳ ಬಂಧನ: ಹಲವು ವರ್ಷಗಳಿಂದ ತಲೆಮರೆಸಿಕೊಂಡಿದ್ದ 24 LPC ಪ್ರಕರಣಗಳ ಆರೋಪಿಗಳು ಹಾಗೂ NBW ವಾರಂಟ್ ಹೊಂದಿದ್ದ ವ್ಯಕ್ತಿಗಳನ್ನು ಯಶಸ್ವಿಯಾಗಿ ಬಂಧಿಸಲಾಗಿದೆ.

**ಮಾದಕದ್ರವ್ಯ ಜಾಲದ ವಿರುದ್ಧ ಕಠಿಣ ಕ್ರಮ:**

* ಗಾಂಜಾ/ಮಾದಕವಸ್ತು ಮಾರಾಟ ಮತ್ತು ಸಾಗಾಟಕ್ಕೆ ಸಂಬಂಧಿಸಿದಂತೆ 84 ಪ್ರಕರಣಗಳನ್ನು ದಾಖಲಿಸಿ, 142 ಪೆಡ್ಲರ್‌ಗಳನ್ನು ಬಂಧಿಸಲಾಗಿದೆ.
* ಮಾದಕದ್ರವ್ಯ ಸೇವನೆಗೆ ಸಂಬಂಧಿಸಿ 346 ಪ್ರಕರಣಗಳನ್ನು ದಾಖಲಿಸಿ, 443 ಆರೋಪಿಗಳನ್ನು ವಶಕ್ಕೆ ಪಡೆದು ತನಿಖೆ ನಡೆಸಲಾಗಿದೆ.

**ನೇಪಾಳದ ಸೈಬರ್ ವಂಚನೆ ಜಾಲ ಭೇದಿಸಿದ ತಂಡಕ್ಕೆ ಶ್ಲಾಘನೆ:**

ಸೈಬರ್ ಅಪರಾಧಗಳ ತಡೆಗೆ ನಿರಂತರ ಜಾಗೃತಿ ಮೂಡಿಸುತ್ತಿರುವುದರಿಂದ ಸೈಬರ್ ವಂಚನೆ ಪ್ರಮಾಣ ತಗ್ಗಿದೆ. 1930 ಸಹಾಯವಾಣಿ ಮೂಲಕ ತಕ್ಷಣ ಸ್ಪಂದಿಸಿ ಸಾರ್ವಜನಿಕರ ಹಣ ಮರಳಿ ಪಡೆಯಲು ಶ್ರಮಿಸಿದ ಅಧಿಕಾರಿಗಳನ್ನು ಗೌರವಿಸಲಾಯಿತು. ಮುಖ್ಯವಾಗಿ ನೇಪಾಳದಿಂದ ಕಾರ್ಯಾಚರಿಸುತ್ತಿದ್ದ ಬೃಹತ್ 'Investment Fraud' ಜಾಲವನ್ನು ಭೇದಿಸಿ, ದೇಶದ ವಿವಿಧ ರಾಜ್ಯಗಳಲ್ಲಿದ್ದ ಸೈಬರ್ ಅಪರಾಧಿಗಳನ್ನು ಪತ್ತೆಹಚ್ಚಿದ ಸಿಬ್ಬಂದಿಯ ಕಾರ್ಯಕ್ಕೆ ವಿಶೇಷ ಮೆಚ್ಚುಗೆ ವ್ಯಕ್ತವಾಯಿತು.

**ಇತರ ಪ್ರಮುಖ ಸಾಧನೆಗಳು:**

* **ಸಾಮಾಜಿಕ ಜಾಲತಾಣ ನಿಗಾ:** ದ್ವೇಷ ಭಾಷಣ, ಅಪಪ್ರಚಾರ ಹಾಗೂ ಪ್ರಚೋದನಕಾರಿ ಸಂದೇಶ ಹರಡುವವರ ವಿರುದ್ಧ ಪ್ರಕರಣ ದಾಖಲಿಸಿ ಶಾಂತಿ ಸುವ್ಯವಸ್ಥೆ ಕಾಪಾಡಲಾಗಿದೆ.
* **ಶಿಕ್ಷೆ ಪ್ರಮಾಣ ಹೆಚ್ಚಳ:** ಗುಣಮಟ್ಟದ ತನಿಖೆ ನಡೆಸಿ ನ್ಯಾಯಾಲಯದಲ್ಲಿ ಆರೋಪಿಗಳಿಗೆ ಶಿಕ್ಷೆಯಾಗುವಂತೆ ಮಾಡಿದ ತನಿಖಾಧಿಕಾರಿಗಳಿಗೆ ಗೌರವ ಸಲ್ಲಿಸಲಾಗಿದೆ.
* **ತುರ್ತು ಸೇವೆ & ಬಂದೋಬಸ್ತ್:** 112 ತುರ್ತು ಸ್ಪಂದನೆ ಸಹಾಯವಾಣಿ ಮತ್ತು ಬಂದೋಬಸ್ತ್ ಕಾರ್ಯಗಳನ್ನು ಸುಗಮವಾಗಿ ನಿರ್ವಹಿಸಿದ ನಗರ ನಿಸ್ತಂತು (Wireless) ವಿಭಾಗದ ಸಿಬ್ಬಂದಿಗೂ ಪ್ರಶಂಸನಾ ಪತ್ರ ನೀಡಲಾಗಿದೆ.

## ಎಸ್‌ಡಿಎಂ ಟ್ರಸ್ಟ್‌ನಿಂದ 1.75 ಕೋಟಿ ವಿದ್ಯಾರ್ಥಿವೇತನ - 1,549 ವಿದ್ಯಾರ್ಥಿಗಳಿಗೆ ನೆರವು

ಆರ್ಥಿಕವಾಗಿ ಹಿಂದುಳಿದ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಮತ್ತಷ್ಟು ಬಲ ತುಂಬುವ ಉದ್ದೇಶದಿಂದ ಎಸ್.ಡಿ.ಎಂ ಎಜುಕೇಶನಲ್ ಟ್ರಸ್ಟ್ (ರಿ.) 2026–27ನೇ ಸಾಲಿನಲ್ಲಿ ರಾಜ್ಯಾದ್ಯಂತ 1,549 ವಿದ್ಯಾರ್ಥಿಗಳಿಗೆ ಒಟ್ಟು 1,74,97,500 ವಿದ್ಯಾರ್ಥಿವೇತನ ವಿತರಿಸಿದೆ. ಸುಮಾರು 168 ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಈ ಯೋಜನೆಯ ಪ್ರಯೋಜನ ಪಡೆಯುತ್ತಿದ್ದಾರೆ. ಉಜಿರೆಯ ಎಸ್.ಡಿ.ಎಂ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ನಡೆದ ವಿದ್ಯಾರ್ಥಿವೇತನ ವಿತರಣಾ ಸಮಾರಂಭದಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಡಿ. ಹರ್ಷೇಂದ್ರ ಕುಮಾರ್ ವಿದ್ಯಾರ್ಥಿವೇತನ ವಿತರಿಸಿ ಮಾತನಾಡಿದರು.




"ವಿದ್ಯಾವಂತರಾಗುವುದರ ಜೊತೆಗೆ ವಿಚಾರವಂತರೂ, ಆಚಾರವಂತರೂ ಆಗಬೇಕು. ಕಲಿತ ವಿದ್ಯೆ ಬದುಕಿನಲ್ಲಿ ಮೌಲ್ಯವಾಗಿ ಮೂಡಿ ಬಂದಾಗಲೇ ಅದು ಸಾರ್ಥಕವಾಗುತ್ತದೆ" ಎಂದು ಅವರು ಹೇಳಿದರು. ವಿದ್ಯಾರ್ಥಿವೇತನ ಯೋಜನೆ ವಿದ್ಯಾರ್ಥಿಗಳಷ್ಟೇ ಅಲ್ಲ, ಅವರ ಪೋಷಕರ ಆರ್ಥಿಕ ಹೊರೆ ತಗ್ಗಿಸುವ ಮಹತ್ವದ ಕಾರ್ಯಕ್ರಮವಾಗಿದೆ. ಕಳೆದ ನಾಲ್ಕು ದಶಕಗಳಿಂದ ಸಾವಿರಾರು ವಿದ್ಯಾರ್ಥಿಗಳು ಈ ಯೋಜನೆಯ ಸದುಪಯೋಗ ಪಡೆದು ತಮ್ಮ ಬದುಕನ್ನು ರೂಪಿಸಿಕೊಂಡಿದ್ದಾರೆ. ವಿದ್ಯಾರ್ಥಿಗಳು ತಮ್ಮ ಬೆಳವಣಿಗೆಗೆ ಪ್ರೋತ್ಸಾಹ ನೀಡಿದ ಸಂಸ್ಥೆಯ ಮೇಲಿನ ಕೃತಜ್ಞತೆಯನ್ನು ಮರೆಯಬಾರದು ಎಂದು ಅವರು ಸಲಹೆ ನೀಡಿದರು.

ರಾಜ್ಯಾದ್ಯಂತ ಎಸ್.ಡಿ.ಎಂ ಶಿಕ್ಷಣ ಸಂಸ್ಥೆಗಳು ಗುಣಮಟ್ಟದ ಶಿಕ್ಷಣ ನೀಡುತ್ತಿದ್ದು, ವಿದ್ಯಾರ್ಥಿಗಳು ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಬೇಕು. ಯುವಜನತೆ ಮಾದಕ ವ್ಯಸನದಂತಹ ದುಷ್ಪ್ರವೃತ್ತಿಗಳಿಂದ ದೂರವಿದ್ದು ಸಮಾಜಕ್ಕೆ ಮಾದರಿಯಾಗಬೇಕು ಎಂದು ಕರೆ ನೀಡಿದರು. ಸಮಾರಂಭದ ಅಧ್ಯಕ್ಷತೆಯನ್ನು ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ವಹಿಸಿದ್ದರು. ವೇದಿಕೆಯಲ್ಲಿ ಎಸ್.ಡಿ.ಎಂ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಡಾ. ಸತೀಶ್ಚಂದ್ರ ಎಸ್., ಶೈಕ್ಷಣಿಕ ಸಂಯೋಜಕ ಪ್ರೊ. ಎಸ್.ಎನ್. ಕಾಕತ್ಕಾರ್, ಎಸ್.ಡಿ.ಎಂ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ. ಅಶೋಕ್ ಟಿ., ಪ್ರಕೃತಿ ಚಿಕಿತ್ಸೆ ಮತ್ತು ಯೋಗ ಕಾಲೇಜಿನ ಪ್ರಾಂಶುಪಾಲ ಡಾ. ಪ್ರಶಾಂತ್ ಶೆಟ್ಟಿ ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಡೀನ್ ಡಾ. ಸೌಮ್ಯ ಬಿ.ಪಿ ಉಪಸ್ಥಿತರಿದ್ದರು.

40 ವರ್ಷಗಳಿಂದ ನಿರಂತರ ಸೇವೆ: ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ಸಮಾಜಮುಖಿ ಚಿಂತನೆಯ ಫಲವಾಗಿ 1985ರಲ್ಲಿ ಆರಂಭವಾದ ಈ ವಿದ್ಯಾರ್ಥಿವೇತನ ಯೋಜನೆ ಕಳೆದ ನಾಲ್ಕು ದಶಕಗಳಿಂದ ಆರ್ಥಿಕವಾಗಿ ಹಿಂದುಳಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಿರಂತರ ನೆರವು ನೀಡುತ್ತಿದೆ. 168 ಕಾಲೇಜುಗಳ 1,549 ವಿದ್ಯಾರ್ಥಿಗಳಿಗೆ ಲಾಭ: ಈ ಸಾಲಿನಲ್ಲಿ ವೈದ್ಯಕೀಯ ವಿಭಾಗದ 200, ಎಂಜಿನಿಯರಿಂಗ್‌ನ 563, ಸ್ನಾತಕೋತ್ತರ ವಿಭಾಗದ 273, ಐಟಿಐ ವಿಭಾಗದ 166, ಡಿಪ್ಲೊಮಾ ವಿಭಾಗದ 96 ಹಾಗೂ ಕಾನೂನು, ನರ್ಸಿಂಗ್, ಕೃಷಿ, ಪಶುವೈದ್ಯಕೀಯ, ಫಿಸಿಯೋಥೆರಪಿ, ಬಿ.ಎಡ್ ಸೇರಿದಂತೆ ವಿವಿಧ ವಿಭಾಗಗಳ 236 ವಿದ್ಯಾರ್ಥಿಗಳು ಸೇರಿ ಒಟ್ಟು 1,549 ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಆಯ್ಕೆಯಾಗಿದ್ದಾರೆ. ಪ್ರತಿ ತಿಂಗಳು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ವಿದ್ಯಾರ್ಥಿವೇತನ ಜಮೆಯಾಗಲಿದೆ. ಕಾರ್ಯಕ್ರಮದಲ್ಲಿ ವಿವಿಧ ಎಸ್.ಡಿ.ಎಂ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ಉಪನ್ಯಾಸಕರು ಹಾಗೂ ರಾಜ್ಯದ ವಿವಿಧ ಕಾಲೇಜುಗಳಿಂದ ಆಯ್ಕೆಯಾದ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪ್ರೊ. ಎಸ್.ಎನ್. ಕಾಕತ್ಕಾರ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪನ್ಯಾಸಕಿ ನಫಿಸತ್ ಕಾರ್ಯಕ್ರಮ ನಿರೂಪಿಸಿದರೆ, ಡಾ. ಸೌಮ್ಯ ಬಿ.ಪಿ ವಂದಿಸಿದರು.

## ಹೆದ್ದಾರಿ ಅಪಘಾತ ಸಂತ್ರಸ್ತರಿಗೆ 2.5 ಲಕ್ಷ ಉಚಿತ ಚಿಕಿತ್ಸೆ - ಸಚಿವ ಯು.ಟಿ. ಖಾದರ್

ರಾಜ್ಯದ ಹೆದ್ದಾರಿಗಳಲ್ಲಿ ರಸ್ತೆ ಅಪಘಾತಕ್ಕೊಳಗಾಗುವ ಯಾವುದೇ ವ್ಯಕ್ತಿಗೆ ಮೊದಲ ಏಳು ದಿನಗಳವರೆಗೆ 2.5 ಲಕ್ಷದವರೆಗೆ ಉಚಿತ ಚಿಕಿತ್ಸೆ ನೀಡುವ ಮಹತ್ವಾಕಾಂಕ್ಷಿ ಯೋಜನೆಯನ್ನು ರಾಜ್ಯ ಸರ್ಕಾರ ಜಾರಿಗೆ ತರಲು ಮುಂದಾಗಿದೆ ಎಂದು ಆರೋಗ್ಯ ಸಚಿವರಾದ ಯು.ಟಿ. ಖಾದರ್ ಅವರು ತಿಳಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಕುಮಟಾದಲ್ಲಿ ನೂತನ ಟ್ರಾಮಾ ಕೇರ್ ಸೆಂಟರ್ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ರಸ್ತೆ ಅಪಘಾತಗಳಲ್ಲಿ ಸಕಾಲದಲ್ಲಿ ಚಿಕಿತ್ಸೆ ದೊರೆಯದೆ ಅನೇಕ ಅಮೂಲ್ಯ ಜೀವಗಳು ಕಳೆದುಹೋಗುತ್ತಿರುವ ಹಿನ್ನೆಲೆಯಲ್ಲಿ ಈ ಯೋಜನೆ ರೂಪಿಸಲಾಗುತ್ತಿದೆ ಎಂದು ಹೇಳಿದರು. ಅಪಘಾತಕ್ಕೊಳಗಾದ ವ್ಯಕ್ತಿಯ ಗುರುತು ತಿಳಿದಿರಲಿ ಅಥವಾ ತಿಳಿಯದಿರಲಿ, ಮೊದಲ ಏಳು ದಿನಗಳ ಚಿಕಿತ್ಸೆಗೆ 2.5 ಲಕ್ಷದವರೆಗೆ ಸರ್ಕಾರವೇ ವೆಚ್ಚ ಭರಿಸುವ ಉದ್ದೇಶವಿದೆ. ಈ ಕುರಿತು ಶೀಘ್ರದಲ್ಲೇ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ ಅಂತಿಮ ಅನುಮೋದನೆ ಪಡೆಯಲಾಗುವುದು ಎಂದು ಸಚಿವರು ತಿಳಿಸಿದರು. ಈ ಯೋಜನೆ ಕೇವಲ ಕರ್ನಾಟಕದ ನಿವಾಸಿಗಳಿಗೆ ಮಾತ್ರ ಸೀಮಿತವಾಗಿರುವುದಿಲ್ಲ. ರಾಜ್ಯದ ಹೆದ್ದಾರಿಯಲ್ಲಿ ಅಪಘಾತಕ್ಕೊಳಗಾಗುವ ಇತರ ರಾಜ್ಯಗಳ ನಾಗರಿಕರು ಹಾಗೂ ವಿದೇಶಿ ಪ್ರಜೆಗಳಿಗೂ ಯೋಜನೆಯ ಸೌಲಭ್ಯ ಕಲ್ಪಿಸುವ ಉದ್ದೇಶವಿದೆ ಎಂದು ಅವರು ಹೇಳಿದರು. ತಮ್ಮ ಹಿಂದಿನ ಅವಧಿಯಲ್ಲಿ ಜಾರಿಗೆ ತಂದಿದ್ದ 'ಹರೀಶ್ ಸಾಂತ್ವನ ಯೋಜನೆ'ಯನ್ನು ಸ್ಮರಿಸಿದ ಖಾದರ್, ಅದರ ಮಾದರಿಯನ್ನೇ ಬಳಿಕ ಕೇಂದ್ರ ಸರ್ಕಾರವೂ ಅನುಸರಿಸಿತ್ತು. ಇದೀಗ ಹೊಸ ಯೋಜನೆಯಲ್ಲಿ ಚಿಕಿತ್ಸಾ ಮೊತ್ತವನ್ನು 2.5 ಲಕ್ಷಕ್ಕೆ ಹೆಚ್ಚಿಸಲಾಗಿದ್ದು, ಅಪಘಾತ ಸಂತ್ರಸ್ತರಿಗೆ ಇನ್ನಷ್ಟು ಪರಿಣಾಮಕಾರಿ ನೆರವು ದೊರೆಯಲಿದೆ ಎಂದರು.

ರಾಜ್ಯದ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳನ್ನು ಯೋಜನೆಯ ವ್ಯಾಪ್ತಿಗೆ ತರಲು ಸರ್ಕಾರ ಉದ್ದೇಶಿಸಿದ್ದು, ಅಪಘಾತ ಸಂತ್ರಸ್ತರಿಗೆ ನೀಡುವ ಚಿಕಿತ್ಸೆಯ ವೆಚ್ಚವನ್ನು ಸರ್ಕಾರವೇ ನೇರವಾಗಿ ಆಸ್ಪತ್ರೆಗಳಿಗೆ ಪಾವತಿಸಲಿದೆ. ಇದರಿಂದ ಯಾವುದೇ ವಿಳಂಬವಿಲ್ಲದೆ ತಕ್ಷಣ ಚಿಕಿತ್ಸೆ ಆರಂಭಿಸಲು ಸಾಧ್ಯವಾಗಲಿದ್ದು, ಟ್ರಾಮಾ ಕೇರ್ ಕೇಂದ್ರಗಳ ಕಾರ್ಯಕ್ಷಮತೆಯೂ ಹೆಚ್ಚಲಿದೆ ಎಂದು ಅವರು ಅಭಿಪ್ರಾಯಪಟ್ಟರು. ರಾಜ್ಯದಲ್ಲಿ ರಸ್ತೆ ಅಪಘಾತಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ 'ಸುವರ್ಣ ಘಂಟೆ' (Golden Hour)ಯೊಳಗೆ ಚಿಕಿತ್ಸೆ ದೊರೆಯುವುದು ಜೀವ ಉಳಿಸುವಲ್ಲಿ ಅತ್ಯಂತ ನಿರ್ಣಾಯಕವಾಗಿದೆ. ಅಪಘಾತಕ್ಕೊಳಗಾದವರ ಗುರುತು ಅಥವಾ ಕುಟುಂಬದ ಮಾಹಿತಿ ತಕ್ಷಣ ಲಭ್ಯವಾಗದಿರುವುದು, ಹಣದ ಕೊರತೆ ಮೊದಲಾದ ಕಾರಣಗಳಿಂದ ಚಿಕಿತ್ಸೆ ವಿಳಂಬವಾಗುವ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಈ ಯೋಜನೆ ಜಾರಿಗೆ ತರಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

KARAVALI SUDDI PRGI No. KARBIL/2015/62120 Posted on Every Saturday @ Mangaluru RMS. Vol: 12 Issue: 10 DAKSHINA KANNADA 27 JULY - 02 AUGUST 2026 Page: 3

# 'ಡ್ರಗ್ಸ್ ಫ್ರೀ ಮಂಗಳೂರು' ಕಾರ್ಯಾಚರಣೆಗೆ ಮಹಾ ಯಶಸ್ಸು

## 5.20 ಕೋಟಿ ಮೌಲ್ಯದ 5.196 ಕೆಜಿ MDMA ಜಪ್ತಿ - ಬೆಳ್ತಂಗಡಿ ಮೂಲದ ಇಬ್ಬರ ಬಂಧನ

'ಡ್ರಗ್ಸ್ ಫ್ರೀ ಮಂಗಳೂರು' ಅಭಿಯಾನದ ಭಾಗವಾಗಿ ಮಂಗಳೂರು ನಗರ ಸಿಸಿಬಿ ಪೊಲೀಸರು ನಡೆಸಿದ ಮಹತ್ವದ ಕಾರ್ಯಾಚರಣೆಯಲ್ಲಿ, ದೆಹಲಿಯಿಂದ MDMA ಮಾದಕ ವಸ್ತುವನ್ನು ಸಾಗಾಟ ಮಾಡುತ್ತಿದ್ದ ಬೆಳ್ತಂಗಡಿ ಮೂಲದ ಇಬ್ಬರು ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಿ, ಅವರಿಂದ ಸುಮಾರು 5.20 ಕೋಟಿ ಮೌಲ್ಯದ 5 ಕೆಜಿ 196 ಗ್ರಾಂ MDMA ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಈ ಕಾರ್ಯಾಚರಣೆ ಬಾಗಲಕೋಟೆ ಜಿಲ್ಲೆಯ ಹುನಗುಂದದಲ್ಲಿ ರಾಷ್ಟ್ರೀಯ ಹೆದ್ದಾರಿಯ ಸಮೀಪ ನಡೆದಿದೆ.

ಪೊಲೀಸರ ಮಾಹಿತಿ ಪ್ರಕಾರ, ಸುರತ್ಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ಕುಳಾಯಿಗುಡ್ಡೆ ವಾಟರ್ ಟ್ಯಾಂಕ್ ಸಮೀಪದ ಮನೆಯಲ್ಲಿ ಮಾದಕ ವಸ್ತು ಮಾರಾಟ ನಡೆಯುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ಸಿಸಿಬಿ ತಂಡ ದಾಳಿ ನಡೆಸಿ, ಅಣ್ಣಪ್ಪ ಸ್ವಾಮಿ @ ಮನು ಎಂಬಾತನನ್ನು ಬಂಧಿಸಿತ್ತು. ಆತನಿಂದ 15.17 ಗ್ರಾಂ ಎಂಡಿಎಂಎ (ಅಂದಾಜು 1.50 ಲಕ್ಷ ಮೌಲ್ಯ) ವಶಪಡಿಸಿಕೊಳ್ಳಲಾಗಿತ್ತು. ಈ ಪ್ರಕರಣದ ತನಿಖೆ ವೇಳೆ ಮಾದಕ ವಸ್ತು ಪೂರೈಕೆ ಜಾಲದ ಬಗ್ಗೆ ಮಹತ್ವದ ಸುಳಿವು ಲಭಿಸಿತ್ತು. ತನಿಖೆಯನ್ನು ಮುಂದುವರಿಸಿದ ಸಿಸಿಬಿ ಅಧಿಕಾರಿಗಳು, ದೆಹಲಿಯಿಂದ ದೊಡ್ಡ ಪ್ರಮಾಣದ ಎಂಡಿಎಂಎ ಖರೀದಿಸಿಕೊಂಡು ಬೆಂಗಳೂರಿನತ್ತ ಕಾರಿನಲ್ಲಿ ಸಾಗಾಟ ಮಾಡಲಾಗುತ್ತಿದೆ ಎಂಬ ಖಚಿತ ಮಾಹಿತಿ ಆಧರಿಸಿ, ಜುಲೈ 15ರಂದು ಬಾಗಲಕೋಟೆ ಜಿಲ್ಲೆಯ ಹುನಗುಂದದಲ್ಲಿರುವ ರಾಷ್ಟ್ರೀಯ ಹೆದ್ದಾರಿಯ ರಾಯಲ್ ಇನ್ ಲಾಡ್ಜ್ ಮೇಲೆ ದಾಳಿ ನಡೆಸಿದರು.

ಈ ವೇಳೆ ಬೆಳ್ತಂಗಡಿ ಇಂಡಬೆಟ್ಟುವಿನ 28 ವರ್ಷ ಪ್ರಾಯದ ಮೊಹಮ್ಮದ್ ಅಲ್ತಾಜ್ ಹಾಗೂ ಉಜಿರೆ ಲಾಯಿಲಾದ 28 ವರ್ಷ ಪ್ರಾಯದ ಮೊಹಮ್ಮದ್ ಮುಸ್ತಾಫಾ ಅವರನ್ನು ಬಂಧಿಸಲಾಯಿತು. ಆರೋಪಿಗಳಿಂದ 5 ಕೆಜಿ 196 ಗ್ರಾಂ MDMA, ಬ್ಯಾಗ್ ಹಾಗೂ ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಪೊಲೀಸರ ತನಿಖೆಯಲ್ಲಿ, ಆರೋಪಿಗಳು ದೆಹಲಿಯಿಂದ ಮಾದಕ ವಸ್ತು ಖರೀದಿಸಿ, ಬೆಂಗಳೂರನ್ನು ಕೇಂದ್ರವಾಗಿಸಿಕೊಂಡು ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳು ಹಾಗೂ ಕೇರಳದ ವಿವಿಧ ಭಾಗಗಳಿಗೆ ಪೂರೈಕೆ ಮಾಡುತ್ತಿರುವುದು ಬೆಳಕಿಗೆ ಬಂದಿದೆ. ಈ ಜಾಲದಲ್ಲಿ ಇನ್ನೂ ಹಲವರು ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದ್ದು, ಅವರ ಪತ್ತೆಗಾಗಿ ತನಿಖೆ ಮುಂದುವರಿದಿದೆ.

ಬಂಧಿತ ಆರೋಪಿ ಮೊಹಮ್ಮದ್ ಅಲ್ತಾಜ್ ವಿರುದ್ಧ ಈ ಹಿಂದೆಯೇ 2024ರಲ್ಲಿ ಕೊಣಾಜೆ ಪೊಲೀಸ್ ಠಾಣೆ ಹಾಗೂ 2026ರಲ್ಲಿ ಉರ್ವ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ MDMA ಮಾರಾಟ ಪ್ರಕರಣಗಳು ದಾಖಲಾಗಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಈ ಭಾರೀ ಕಾರ್ಯಾಚರಣೆಯನ್ನು ಮಂಗಳೂರು ನಗರ ಸಿಸಿಬಿ ಘಟಕದ ಅಧಿಕಾರಿಗಳು ಹಾಗೂ ಸಿಬ್ಬಂದಿ ಯಶಸ್ವಿಯಾಗಿ ನಡೆಸಿದ್ದು, 'ಡ್ರಗ್ಸ್ ಫ್ರೀ ಮಂಗಳೂರು' ಅಭಿಯಾನಕ್ಕೆ ಇದು ಮತ್ತೊಂದು ಮಹತ್ವದ ಯಶಸ್ಸೆಂದು ಪೊಲೀಸ್ ಇಲಾಖೆ ತಿಳಿಸಿದೆ.

## ಡೀಸೆಲ್ ಅವಾಂತರ - ಸರಣಿ ಅಪಘಾತ, ಕಾರು ಪಲ್ಟಿ

ರಾಷ್ಟ್ರೀಯ ಹೆದ್ದಾರಿ–169ರ ಚಿಕ್ಕಮಗಳೂರು–ಉಡುಪಿ ಗಡಿಭಾಗದ ಮಾಳ ಘಾಟ್‌ನಲ್ಲಿ ಡೀಸೆಲ್ ರಸ್ತೆ ಮೇಲೆ ಸೋರಿಕೆಯಾದ ಪರಿಣಾಮ ಸರಣಿ ಅಪಘಾತ ಸಂಭವಿಸಿದ್ದು, ಒಂದು ಕಾರು ಪಲ್ಟಿಯಾಗಿ ಕೆಲವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಟಿಪ್ಪರ್ ಲಾರಿ ಮತ್ತು ಕಾರಿನ ನಡುವೆ ಸಂಭವಿಸಿದ ಢಿಕ್ಕಿಯಿಂದ ಡೀಸೆಲ್ ರಸ್ತೆಯ ಮೇಲೆ ಸೋರಿಕೆಯಾಗಿದ್ದು, ರಸ್ತೆ ಜಾರುವಂತಾಗಿತ್ತು. ಇದರ ಪರಿಣಾಮ ಹಿಂದಿನಿಂದ ಬರುತ್ತಿದ್ದ ಎರಡು ಕಾರುಗಳು ನಿಯಂತ್ರಣ ಕಳೆದುಕೊಂಡು ಪರಸ್ಪರ ಡಿಕ್ಕಿ ಹೊಡೆದು ರಸ್ತೆಯಿಂದ ಜಾರಿ ಬಿದ್ದವು. ಈ ವೇಳೆ ಒಂದು ಕಾರು ಪಲ್ಟಿಯಾಗಿದ್ದು, ವಾಹನಗಳಲ್ಲಿದ್ದ ಕೆಲ ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಅಪಘಾತದಿಂದ ಕೆಲಕಾಲ ಮಾಳ ಘಾಟ್‌ನಲ್ಲಿ ಸಂಚಾರ ಅಸ್ತವ್ಯಸ್ತಗೊಂಡಿತ್ತು. ಮಾಹಿತಿ ತಿಳಿದು ಸ್ಥಳಕ್ಕಾಗಮಿಸಿದ ಕಾರ್ಕಳ ಗ್ರಾಮೀಣ ಠಾಣೆ ಪೊಲೀಸರು ರಸ್ತೆಯ ಮೇಲಿದ್ದ ಡೀಸೆಲ್ ತೆರವುಗೊಳಿಸಲು ಮರಳು ಹಾಕಿ, ಅಪಘಾತಕ್ಕೀಡಾದ ವಾಹನಗಳನ್ನು ಸ್ಥಳಾಂತರಿಸಿ ಸಂಚಾರವನ್ನು ಪುನಃ ಸುಗಮಗೊಳಿಸಿದರು. ನಿರಂತರ ಮಳೆಯಿಂದ ಘಾಟ್ ರಸ್ತೆಗಳು ಹೆಚ್ಚು ಜಾರುವ ಸಾಧ್ಯತೆ ಇರುವುದರಿಂದ ವಾಹನ ಸವಾರರು ವೇಗ ನಿಯಂತ್ರಿಸಿ ಅತ್ಯಂತ ಎಚ್ಚರಿಕೆಯಿಂದ ಸಂಚರಿಸುವಂತೆ ಪೊಲೀಸರು ಮನವಿ ಮಾಡಿದ್ದಾರೆ.

## ಬಂಟ್ವಾಳ ಕೊಲೆ ಪ್ರಕರಣ - ಸುಳ್ಳು ಪೋಸ್ಟ್‌ಗಳಿಗೆ ಪೊಲೀಸರ ಕಠಿಣ ಕ್ರಮ

ಬಂಟ್ವಾಳ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು, ತಿರುಚಿದ ಹಾಗೂ ಸಮಾಜದ ಶಾಂತಿ ಕದಡುವ ರೀತಿಯ ಪೋಸ್ಟ್‌ಗಳನ್ನು ಪ್ರಸಾರ ಮಾಡಿದವರ ವಿರುದ್ಧ ಬಂಟ್ವಾಳ ನಗರ ಪೊಲೀಸರು ಮೂರು ಪ್ರತ್ಯೇಕ ಪ್ರಕರಣಗಳನ್ನು ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ಪೊಲೀಸರ ಪ್ರಕಟಣೆಯ ಪ್ರಕಾರ, ಅಪರಾಧ ಸಂಖ್ಯೆ 95/2026ಕ್ಕೆ ಸಂಬಂಧಿಸಿದ ಆರೋಪಿಯ ಭಾವಚಿತ್ರವನ್ನು ಕೇಸರಿ ಶಾಲು, ಕುಂಕುಮ ಸೇರಿಸಿ ಭಜರಂಗದಳದ ಕಾರ್ಯಕರ್ತ ಎಂದು ತಿರುಚಿ, ಪ್ರಚೋದನಾತ್ಮಕ ಬರಹಗಳೊಂದಿಗೆ ವಿವಿಧ ವಾಟ್ಸ್‌ಆಪ್ ಗುಂಪುಗಳು ಹಾಗೂ ಇನ್‌ಸ್ಟಾಗ್ರಾಂ ಖಾತೆಗಳಲ್ಲಿ ಹಂಚಿಕೊಳ್ಳಲಾಗಿದೆ.

ಈ ಹಿನ್ನೆಲೆಯಲ್ಲಿ 1) troll_master._Instagram Account 2) Yuva Belthangady Whatsapp group 3) PPadmaraj Padmarajpari Whatsapp group 4) Padmaraj Padmaraj pari Whatsapp group 5)Yuva Congress Belthangady Whatsappgroup 6) Facts and Justice Whatsappgroup ಗಳ ವಿರುದ್ಧ ಅಪರಾಧ ಸಂಖ್ಯೆ 96/2026ರಡಿ ಬಿಎನ್‌ಎಸ್–2023ರ ಕಲಂ 196 ಹಾಗೂ 353(2) ಅನ್ವಯ ಪ್ರಕರಣ ದಾಖಲಿಸಲಾಗಿದೆ. ಇದೇ ರೀತಿ, Shailaja Amarnath ಎಂಬ ಫೇಸ್‌ಬುಕ್ ಖಾತೆಯಲ್ಲಿ ಸಮಾಜದ ಶಾಂತಿ ಕದಡುವ ರೀತಿಯ ಸುಳ್ಳು ಪೋಸ್ಟ್ ಪ್ರಕಟಿಸಿದ ಆರೋಪದಡಿ ಅಪರಾಧ ಸಂಖ್ಯೆ 97/2026ರಡಿ ಪ್ರಕರಣ ದಾಖಲಾಗಿದೆ. ಅಲ್ಲದೆ, Chethan Belchada ಎಂಬ ಫೇಸ್‌ಬುಕ್ ಖಾತೆಯಲ್ಲಿ ಆರೋಪಿಯ ಭಾವಚಿತ್ರವನ್ನು ಕಾಂಗ್ರೆಸ್ ಪಕ್ಷದ ಕಾರ್ಯಕರ್ತನಂತೆ ತಿರುಚಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ಆರೋಪದಡಿ ಅಪರಾಧ ಸಂಖ್ಯೆ 98/2026ರಡಿ ಬಿಎನ್‌ಎಸ್–2023ರ ಕಲಂ 353(2) ಅನ್ವಯ ಮತ್ತೊಂದು ಪ್ರಕರಣ ದಾಖಲಿಸಲಾಗಿದೆ. ಬಂಟ್ವಾಳ ನಗರ ಪೊಲೀಸರು ಈ ಮೂರು ಪ್ರಕರಣಗಳನ್ನು ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಮಾಹಿತಿ, ತಿರುಚಿದ ಚಿತ್ರಗಳು ಹಾಗೂ ಪ್ರಚೋದನಾತ್ಮಕ ಪೋಸ್ಟ್‌ಗಳನ್ನು ಹರಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ.

## ನಿಯಂತ್ರಣ ತಪ್ಪಿ ಉರುಳಿದ ಥಾರ್ - ನಾಲ್ವರಿಗೆ ಗಾಯ

ಚಾಲಕನ ನಿಯಂತ್ರಣ ತಪ್ಪಿದ ಮಹೀಂದ್ರಾ ಥಾರ್ ಎಸ್‌ಯುವಿ ರಸ್ತೆ ಬದಿಯ ಚರಂಡಿಗೆ ಉರುಳಿ ಬಿದ್ದ ಪರಿಣಾಮ ಚಾಲಕ ಸೇರಿದಂತೆ ನಾಲ್ವರು ಗಾಯಗೊಂಡ ಘಟನೆ ಶಿರ್ವ?ಕಟಪಾಡಿ ರಾಜ್ಯ ಹೆದ್ದಾರಿಯ ಬಂಟಕಲ್ ಸಮೀಪದ ಬಿ.ಸಿ. ರಸ್ತೆ ಬಳಿ ಭಾನುವಾರ ನಡೆದಿದೆ. ಗಾಯಗೊಂಡವರಲ್ಲಿ ಶಿರ್ವ ನಿವಾಸಿ 21 ವರ್ಷ ಪ್ರಾಯದ ವಾಹನ ಚಾಲಕ ಬಾಲಕೃಷ್ಣ, ಇಬ್ಬರು ಯುವತಿಯರು ಸೇರಿದಂತೆ ನಾಲ್ವರು ಇದ್ದಾರೆ. ಇವರಲ್ಲಿ ಮೂವರಿಗೆ ಗಂಭೀರ ಗಾಯಗಳಾಗಿದ್ದು, ಎಲ್ಲರನ್ನೂ ಚಿಕಿತ್ಸೆಗಾಗಿ ಉಡುಪಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಘಾತ ಸಂಭವಿಸಿದ ಕೂಡಲೇ ಸ್ಥಳೀಯರು ಸ್ಥಳಕ್ಕೆ ಧಾವಿಸಿ ವಾಹನದಲ್ಲಿ ಸಿಲುಕಿದ್ದ ಗಾಯಾಳುಗಳನ್ನು ಹೊರತೆಗೆದು ರಕ್ಷಣಾ ಕಾರ್ಯದಲ್ಲಿ ನೆರವಾದರು. ಈ ವೇಳೆ ಕುಂದಾಪುರಕ್ಕೆ ತೆರಳುತ್ತಿದ್ದ ಸೋದೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನದ ಆಡಳಿತಾಧಿಕಾರಿ ಜಯಶೀಲ್ ಹೆಗ್ಡೆ ಗಾಯಾಳುಗಳ ನೆರವಿಗೆ ಧಾವಿಸಿದರು. ಬಂಟಕಲ್ ನಾಗರಿಕ ಸೇವಾ ಸಮಿತಿ ಅಧ್ಯಕ್ಷ ಕೆ.ಆರ್. ಪಾಟ್ಕರ್ ಅವರ ಸಹಕಾರದೊಂದಿಗೆ ಇಬ್ಬರು ಗಾಯಾಳುಗಳನ್ನು ತಮ್ಮ ಕಾರಿನಲ್ಲೇ ಉಡುಪಿಯ ಟಿಎಂಎ ಪೈ ಆಸ್ಪತ್ರೆಗೆ ಸಾಗಿಸಲಾಯಿತು. ಉಳಿದ ಇಬ್ಬರನ್ನು ಬಂಟಕಲ್ ನಾಗರಿಕ ಸೇವಾ ಸಮಿತಿಯ ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ದಾಖಲಿಸಲಾಯಿತು. ಶಿರ್ವ ಪೊಲೀಸ್ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಅಪಘಾತಕ್ಕೆ ನಿಖರ ಕಾರಣದ ಕುರಿತು ತನಿಖೆ ಮುಂದುವರಿಸಿದ್ದಾರೆ.

## ಕಾರಿನ ಮೇಲೆ ಉರುಳಿದ ಬೃಹತ್ ಮರ - ಚಾಲಕ ಪಾರು

ಭಾರೀ ಮಳೆ ಮತ್ತು ಗಾಳಿಯ ಅಬ್ಬರದ ನಡುವೆ ಬೇರುಸಹಿತ ಉರುಳಿದ ಬೃಹತ್ ಮರವೊಂದು ಚಲಿಸುತ್ತಿದ್ದ ಕಾರಿನ ಮೇಲೆ ಬಿದ್ದ ಘಟನೆ ನಗರದ ಬಾವುಟಗುಡ್ಡದಲ್ಲಿರುವ ಸಂತ ಅಲೋಶಿಯಸ್ ಕಾಲೇಜು ಸಮೀಪದ ಒಳರಸ್ತೆಯಲ್ಲಿ ಸೋಮವಾರ ಮಧ್ಯಾಹ್ನ ನಡೆದಿದೆ. ಕಾರು ಜಖಂಗೊಂಡಿದ್ದರೂ ಚಾಲಕ ಯಾವುದೇ ಗಾಯಗಳಿಲ್ಲದೆ ಅದೃಷ್ಟವಶಾತ್ ಪಾರಾಗಿದ್ದಾರೆ. ಭಾರೀ ಗಾಳಿ–ಮಳೆಯ ಪರಿಣಾಮ ಮರ ಏಕಾಏಕಿ ರಸ್ತೆಗೆ ಉರುಳಿ ಸಾಗುತ್ತಿದ್ದ ಕಾರಿನ ಹಿಂಭಾಗದ ಮೇಲೆ ಬಿದ್ದಿದೆ. ಪರಿಣಾಮ ಕಾರು ಹಾನಿಗೊಳಗಾಗಿದ್ದು, ಮರದ ಬೃಹತ್ ಕೊಂಬೆಗಳು ಪಕ್ಕದಲ್ಲಿದ್ದ ಕ್ಯಾಂಟೀನ್ ಮೇಲೂ ಬಿದ್ದ ಕಾರಣ ಕಟ್ಟಡಕ್ಕೂ ಹಾನಿಯಾಗಿದೆ. ಘಟನೆಯ ವೇಳೆ ಕಾರಿನಲ್ಲಿ ಚಾಲಕ ಮಾತ್ರ ಇದ್ದರು. ಮರವು ಕಾರಿನ ಹಿಂಭಾಗಕ್ಕೆ ಬಿದ್ದಿದ್ದರಿಂದ ಅವರು ಯಾವುದೇ ಗಾಯಗಳಾಗದೆ ಅಪಾಯದಿಂದ ಪಾರಾಗಿದ್ದಾರೆ.

ಮಾಹಿತಿ ತಿಳಿಯುತ್ತಿದ್ದಂತೆಯೇ ಪಾಂಡೇಶ್ವರ ಅಗ್ನಿಶಾಮಕ ದಳ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆ (SDRF) ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಮರವನ್ನು ತೆರವುಗೊಳಿಸಿ ರಸ್ತೆ ಸಂಚಾರವನ್ನು ಸುಗಮಗೊಳಿಸಿದರು. ಮಂಗಳೂರು ಮಹಾನಗರ ಪಾಲಿಕೆ (MCC) ಹಾಗೂ ಮೆಸ್ಕಾಂ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಹಾನಿಯ ಪರಿಶೀಲನೆ ನಡೆಸಿ, ಅಗತ್ಯ ಕ್ರಮಗಳನ್ನು ಕೈಗೊಂಡರು.

## ವಿವಾಹಿತೆ ಸಾವು - ಪ್ರಕರಣ ದಾಖಲು

ಕೌಟುಂಬಿಕ ಕಿರುಕುಳದ ಆರೋಪದ ಬೆನ್ನಲ್ಲೇ ವಿವಾಹಿತೆಯೊಬ್ಬರು ಅನುಮಾನಾಸ್ಪದವಾಗಿ ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿ ಮಾವ, ಅತ್ತೆ ಹಾಗೂ ನಾದಿನಿಯ ವಿರುದ್ಧ ಸುಳ್ಯ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ.

ಪುತ್ತೂರು ಕೆದಂಬಾಡಿ ನಿವಾಸಿ 43 ವರ್ಷ ಪ್ರಾಯದ ಜುಬೈದ ಅವರ ಪುತ್ರಿ ಫಾತಿಮತ್ ನಿಶಾ ಅವರನ್ನು ನಾಲ್ಕು ವರ್ಷಗಳ ಹಿಂದೆ ವಿವಾಹ ಮಾಡಿಕೊಡಲಾಗಿತ್ತು. ಜುಲೈ 18ರ ರಾತ್ರಿ ಫಾತಿಮತ್ ನಿಶಾ ಅವರು ತಂದೆಗೆ ಕರೆ ಮಾಡಿ, ತಮ್ಮ ಮಾವ ಅಲವಿ, ಅತ್ತೆ ಆಯಿಷ ಹಾಗೂ ನಾದಿನಿ ಫಸೀಲಾ ಅವರು ಮಾನಸಿಕ ಹಾಗೂ ದೈಹಿಕ ಕಿರುಕುಳ ನೀಡುತ್ತಿರುವುದಾಗಿ ತಿಳಿಸಿದ್ದರು ಎನ್ನಲಾಗಿದೆ. ಮಗಳೊಂದಿಗೆ ಮಾತನಾಡುತ್ತಿದ್ದ ವೇಳೆ ಫೋನ್‌ನ್ನು ಕಸಿದುಕೊಂಡ ಮಾವ ಅಲವಿ, "ನಿನ್ನ ಮಗಳನ್ನು ಕೊಲ್ಲುತ್ತೇನೆ" ಎಂದು ಬೆದರಿಕೆ ಹಾಕಿದ್ದಾನೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಇದರಿಂದ ಆತಂಕಗೊಂಡ ಜುಬೈದ ಅವರು ಮಗಳ ಮನೆಗೆ ತೆರಳುವಷ್ಟರಲ್ಲಿ ಫಾತಿಮತ್ ನಿಶಾ ಮೃತಪಟ್ಟಿರುವುದು ಕಂಡುಬಂದಿದೆ. ಕೌಟುಂಬಿಕ ಮನಸ್ತಾಪದ ಹಿನ್ನೆಲೆಯಲ್ಲಿ ತಮ್ಮ ಮಗಳನ್ನು ಮಾವ ಅಲವಿ, ಅತ್ತೆ ಆಯಿಷ ಹಾಗೂ ನಾದಿನಿ ಫಸೀಲಾ ಕೊಲೆ ಮಾಡಿದ್ದಾರೆ ಎಂದು ಜುಬೈದ ನೀಡಿದ ದೂರಿನ ಮೇರೆಗೆ ಸುಳ್ಯ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 100/2026ರಡಿ ಬಿಎನ್‌ಎಸ್ 2023ರ ಕಲಂ 85, 103(1) ಹಾಗೂ 3(5) ಅನ್ವಯ ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ನೇಪಾಳದ ಅಂತಾರಾಷ್ಟ್ರೀಯ ಮನೆಗಳ್ಳರ ಗ್ಯಾಂಗ್ ಬಲೆಗೆ

ಮಂಗಳೂರು ನಗರದಲ್ಲಿ ಮನೆಕಳ್ಳತನ ಪ್ರಕರಣವನ್ನು ದಾಖಲಾದ ಐದು ದಿನಗಳಲ್ಲೇ ಭೇದಿಸಿರುವ ಬರ್ಕೆ ಪೊಲೀಸರು ನೇಪಾಳ ಮೂಲದ ಮೂವರು ಕುಖ್ಯಾತ ಅಂತಾರಾಷ್ಟ್ರೀಯ ಮನೆಗಳ್ಳರನ್ನು ಬಂಧಿಸಿ, ಸುಮಾರು 10 ಲಕ್ಷ ಮೌಲ್ಯದ ಚಿನ್ನ ಮತ್ತು ಬೆಳ್ಳಿ ಆಭರಣಗಳನ್ನು ವಶಕ್ಕೆ ಪಡೆದಿದ್ದಾರೆ. ಉರ್ವ ಮಾರ್ಕೆಟ್ ಸಮೀಪದ ಮಠದಕಣಿ ನಿವಾಸಿಯೊಬ್ಬರು ಮನೆಗೆ ಬೀಗ ಹಾಕಿ ಸಂಬಂಧಿಕರ ಮನೆಗೆ ತೆರಳಿದ್ದರು. ಮರುದಿನ ಮನೆಗೆ ಮರಳಿದಾಗ ಹಿಂಬಾಗಿಲು ಒಡೆದು ಸುಮಾರು 64 ಗ್ರಾಂ ಚಿನ್ನಾಭರಣ, 25 ಸಾವಿರ ನಗದು ಸೇರಿದಂತೆ ಒಟ್ಟು 8.57 ಲಕ್ಷ ಮೌಲ್ಯದ ಸೊತ್ತು ಕಳವಾಗಿರುವುದು ಬೆಳಕಿಗೆ ಬಂದಿತ್ತು. ಈ ಸಂಬಂಧ ಬರ್ಕೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಆರಂಭಿಸಲಾಗಿತ್ತು. ಪ್ರಕರಣ ದಾಖಲಾದ ಐದು ದಿನಗಳಲ್ಲೇ ಬೋಳೂರು ಪ್ರದೇಶದಲ್ಲಿ ಕಾರ್ಯಾಚರಣೆ ನಡೆಸಿದ ಬರ್ಕೆ ಠಾಣೆ ಪೊಲೀಸರು ನೇಪಾಳ ಮೂಲದ ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ. ವಿಚಾರಣೆ ವೇಳೆ ಆರೋಪಿಗಳಿಂದ ಈ ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಚಿನ್ನಾಭರಣಗಳೊಂದಿಗೆ ಮಹಾರಾಷ್ಟ್ರದ ನಾಸಿಕ್‌ನಲ್ಲಿ ಕಳವು ಮಾಡಲಾಗಿದ್ದ ಸುಮಾರು 790 ಗ್ರಾಂ ಬೆಳ್ಳಿ ಆಭರಣಗಳನ್ನು ಸೇರಿ ಒಟ್ಟು 10 ಲಕ್ಷ ಮೌಲ್ಯದ ಸೊತ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಬಂಧಿತರು ಈ ವರ್ಷದ ಮಾರ್ಚ್ ತಿಂಗಳಲ್ಲಿ ಉರ್ವ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಮನೆಕಳ್ಳತನದ ಯತ್ನ ಪ್ರಕರಣದಲ್ಲೂ ಭಾಗಿಯಾಗಿರುವುದನ್ನು ವಿಚಾರಣೆ ವೇಳೆ ಒಪ್ಪಿಕೊಂಡಿದ್ದಾರೆ. ಅಲ್ಲದೆ ಬೆಂಗಳೂರು, ದಾವಣಗೆರೆ, ಉಡುಪಿ ಸೇರಿದಂತೆ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ 15ಕ್ಕೂ ಹೆಚ್ಚು ಮನೆಕಳ್ಳತನ ಪ್ರಕರಣಗಳಲ್ಲಿ ಹಾಗೂ ತಮಿಳುನಾಡು, ದೆಹಲಿ ಮತ್ತು ಹರಿಯಾಣ ರಾಜ್ಯಗಳಲ್ಲಿಯೂ ಇವರ ವಿರುದ್ಧ ಪ್ರಕರಣಗಳು ದಾಖಲಾಗಿರುವ ಮಾಹಿತಿ ಲಭ್ಯವಾಗಿದೆ. ಈ ಸಂಬಂಧ ಹೆಚ್ಚಿನ ಮಾಹಿತಿ ಸಂಗ್ರಹಿಸಿ ತನಿಖೆ ಮುಂದುವರಿಸಲಾಗಿದೆ. ಬಂಧಿತ ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸ ಲಾಗುವುದು ಎಂದು ಮಂಗಳೂರು ನಗರ ಪೊಲೀಸ್ ಪ್ರಕಟಣೆಯಲ್ಲಿ ತಿಳಿಸಿದೆ.

## ದೋಣಿ ಪಲ್ಟಿ - ಮೀನುಗಾರರು ಪಾರು

ಬಿರುಗಾಳಿ ಮತ್ತು ಬೃಹತ್ ಅಲೆಗಳ ಅಬ್ಬರಕ್ಕೆ ಸಿಲುಕಿ ಮೀನುಗಾರಿಕಾ ದೋಣಿಯೊಂದು ಪಲ್ಟಿಯಾದ ಘಟನೆ ಶಿರೂರು ಸಮುದ್ರ ತೀರದ ಕೋಕ್ಕೇರಕಲ್ಲು ಪ್ರದೇಶದ ಬಳಿ ಸಂಭವಿಸಿದ್ದು, ದೋಣಿಯಲ್ಲಿದ್ದ ಐವರು ಮೀನುಗಾರರು ಜೀವ ರಕ್ಷಕ ಜಾಕೆಟ್ ಧರಿಸಿದ್ದ ಕಾರಣ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ರಕ್ಷಿಸಲ್ಪಟ್ಟ ಮೀನುಗಾರರನ್ನು ಪಡುವರಿ ಗ್ರಾಮದ ತಾರಪತಿ ಆಳ್ವೆಕೋಡಿಯ ನಿವಾಸಿಗಳಾದ ನಾಗರಾಜ ಖಾರ್ವಿ, ಯೋಗೀಶ್ ಖಾರ್ವಿ, ರಾಜು ಖಾರ್ವಿ, ಮಂಜುನಾಥ್ ಖಾರ್ವಿ ಹಾಗೂ ಮತ್ತೋರ್ವ ನಾಗರಾಜ ಖಾರ್ವಿ ಎಂದು ಗುರುತಿಸಲಾಗಿದೆ. ಮಲ್ಪೆಯಲ್ಲಿ ಮೀನುಗಾರಿಕೆ ಮುಗಿಸಿ ಭಟ್ಕಳದತ್ತ ಹಿಂದಿರುಗುತ್ತಿದ್ದ ವೇಳೆ ಶಿರೂರು ಸಮುದ್ರ ತೀರದ ಬಳಿ ಬಿರುಗಾಳಿ ಮತ್ತು ಮಳೆಯ ಪರಿಣಾಮ ಉಂಟಾದ ಬೃಹತ್ ಅಲೆ ದೋಣಿಗೆ ಅಪ್ಪಳಿಸಿದ್ದು, ದೋಣಿ ಮಗುಚಿಬಿದ್ದಿದೆ. ಅದೇ ವೇಳೆ ಸಮೀಪದಲ್ಲಿ ಮೀನುಗಾರಿಕೆಯಲ್ಲಿ ತೊಡಗಿದ್ದ ಶೇಖರ್ ಖಾರ್ವಿ ತಕ್ಷಣ ಸ್ಥಳಕ್ಕೆ ಧಾವಿಸಿ ಸಮುದ್ರದಲ್ಲಿ ಸಿಲುಕಿದ್ದ ಐವರನ್ನೂ ಸುರಕ್ಷಿತವಾಗಿ ರಕ್ಷಿಸಿದ್ದಾರೆ. ಅಪಘಾತದಲ್ಲಿ ಮೀನುಗಾರಿಕಾ ದೋಣಿ ಸಂಪೂರ್ಣ ಹಾನಿಗೊಳಗಾಗಿದ್ದು, ಎಂಜಿನ್, ಜಿಪಿಎಸ್ ಸಾಧನ, ಫಿಶ್ ಫೈಂಡರ್, ಐದು ಸೆಟ್ ಮೀನುಗಾರಿಕಾ ಬಲೆಗಳು ಹಾಗೂ 30 ಸಾವಿರ ನಗದು ಸಮುದ್ರ ಪಾಲಾಗಿದೆ. ಘಟನೆಯಿಂದ 7 ಲಕ್ಷಕ್ಕೂ ಅಧಿಕ ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ. ಕರಾವಳಿ ಭದ್ರತಾ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.

## ಕುರಿಯಾಳದಲ್ಲಿ ಅಗ್ನಿ ಅವಘಡ

ಬಂಟ್ವಾಳ ತಾಲೂಕಿನ ಕುರಿಯಾಳ ಗ್ರಾಮದ ದಾಸೋಟ್ಟು–ಕುಕ್ಕಾಜೆ ನಿವಾಸಿ ರಮೇಶ್ ಪೂಜಾರಿ ಅವರ ಮನೆಯ ಹಿಂಭಾಗದಲ್ಲಿದ್ದ ಬಚ್ಚಲು ಮನೆ ಹಾಗೂ ಹಸುವಿನ ಕೊಟ್ಟಿಗೆಗೆ ಆಕಸ್ಮಿಕವಾಗಿ ಬೆಂಕಿ ತಗುಲಿ ಸಂಪೂರ್ಣ ಭಸ್ಮವಾದ ಘಟನೆ ನಡೆದಿದೆ.

ಬೆಂಕಿ ಕ್ಷಣಾರ್ಧದಲ್ಲೇ ವ್ಯಾಪಿಸಿ ಬಚ್ಚಲು ಮನೆ ಹಾಗೂ ಹಸುವಿನ ಕೊಟ್ಟಿಗೆಯನ್ನು ಸಂಪೂರ್ಣವಾಗಿ ಆವರಿಸಿತು. ಸ್ಥಳೀಯರು ಸಮಯಪ್ರಜ್ಞೆ ಮೆರೆದು ಕೊಟ್ಟಿಗೆಯಲ್ಲಿದ್ದ ದನಗಳನ್ನು ಸುರಕ್ಷಿತವಾಗಿ ಹೊರತೆಗೆದ ಪರಿಣಾಮ ಯಾವುದೇ ಜಾನುವಾರುಗಳಿಗೆ ಅಪಾಯ ಸಂಭವಿಸಿಲ್ಲ. ಮಾಹಿತಿ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ ಹಾಗೂ ಸ್ಥಳೀಯರು ಸ್ಥಳಕ್ಕೆ ಧಾವಿಸಿ ಹಲವು ಗಂಟೆಗಳ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದರು. ಇದರಿಂದ ಬೆಂಕಿ ಸುತ್ತಮುತ್ತಲಿನ ಪ್ರದೇಶಕ್ಕೆ ವ್ಯಾಪಿಸುವುದನ್ನು ತಡೆಯಲಾಯಿತು. ಅಗ್ನಿ ಅವಘಡದಿಂದ ಸುಮಾರು 4 ಲಕ್ಷಕ್ಕೂ ಅಧಿಕ ನಷ್ಟ ಸಂಭವಿಸಿದೆ ಎಂದು ಪ್ರಾಥಮಿಕ ತನಿಖೆಯಿಂದ ಅಂದಾಜಿಸಲಾಗಿದೆ. ಗ್ರಾಮ ಕರಣಿಕರ ಸಹಾಯಕರು ಹಾಗೂ ಮಾಜಿ ಪಂಚಾಯತ್ ಸದಸ್ಯರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬೆಂಕಿ ಕಾಣಿಸಿಕೊಳ್ಳಲು ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಸಂಬಂಧಪಟ್ಟ ಅಧಿಕಾರಿಗಳು ಘಟನೆಯ ಕುರಿತು ತನಿಖೆ ನಡೆಸುತ್ತಿದ್ದಾರೆ.

## ಲಾವಣ್ಯ ಹತ್ಯೆ - ಆರೋಪಿ ಚೇತನ್ ಬಂಧನ ವಿಷ ಸೇವಿಸಿ ಆಸ್ಪತ್ರೆಗೆ ದಾಖಲು

ಬಂಟ್ವಾಳ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಯುವತಿ ಲಾವಣ್ಯ ಅವರನ್ನು ಬೆನ್ನಟ್ಟಿ ಮಾರಕಾಸ್ತ್ರದಿಂದ ಬರ್ಬರವಾಗಿ ಹತ್ಯೆಗೈದು ಪರಾರಿಯಾಗಿದ್ದ ಆರೋಪಿಯನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಆದರೆ ಬಂಧನಕ್ಕೂ ಮುನ್ನ ಆರೋಪಿ ಚೇತನ್ ಇಲಿ ಪಾಷಾಣ (ವಿಷ) ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದು, ಸದ್ಯ ಆತನನ್ನು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಕಕ್ಯಪದವು ನಿವಾಸಿಯಾಗಿರುವ ಲಾವಣ್ಯ ಅವರು ಕಲ್ಲಡ್ಕದ ಖಾಸಗಿ ನರ್ಸಿಂಗ್ ಹೋಮ್‌ನಲ್ಲಿ ಸಿಬ್ಬಂದಿಯಾಗಿ ಕೆಲಸ ಮಾಡುತ್ತಿದ್ದರು. ಕೆಲಸ ಮುಗಿಸಿ ತಮ್ಮ ಊರಿಗೆ ತೆರಳಲು ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಕುಳಿತಿದ್ದ ವೇಳೆ, ಅಪರಿಚಿತ ಯುವಕನೊಬ್ಬ ತಮ್ಮ ಪಕ್ಕದಲ್ಲಿ ಬಂದು ಕುಳಿತಿದ್ದರಿಂದ ಆತಂಕಗೊಂಡು ಸಂಬಂಧಿಕರೊಬ್ಬರಿಗೆ ದೂರವಾಣಿ ಕರೆ ಮಾಡಿ ವಿಷಯ ತಿಳಿಸಿದ್ದರು. "ನನ್ನ ಪಕ್ಕದಲ್ಲಿ ಪರ್ವ ಯುವಕ ಕುಳಿತಿದ್ದಾನೆ" ಎಂದು ಹೇಳುತ್ತಿದ್ದಂತೆಯೇ ಕರೆ ಏಕಾಏಕಿ ಕಡಿತಗೊಂಡಿತ್ತು ಎಂದು ತಿಳಿದುಬಂದಿದೆ. ಪ್ರತ್ಯಕ್ಷದರ್ಶಿಗಳ ಮಾಹಿತಿ ಪ್ರಕಾರ, ಬಳಿಕ ಲಾವಣ್ಯ ಬಸ್‌ನಿಂದ ಇಳಿದಾಗ ಆರೋಪಿ ಕೂಡ ಆಕೆಯನ್ನು ಹಿಂಬಾಲಿಸಿದ್ದಾನೆ. ತನ್ನ ಬ್ಯಾಗ್‌ನಲ್ಲಿದ್ದ ಹರಿತವಾದ ಆಯುಧವನ್ನು ಹೊರತೆಗೆದು ದಾಳಿ ನಡೆಸಿದ್ದು, ಪ್ರಾಣಭಯದಿಂದ ಓಡಿ ತಪ್ಪಿಸಿಕೊಳ್ಳಲು ಯತ್ನಿಸಿದ ಲಾವಣ್ಯರನ್ನು ಬೆನ್ನಟ್ಟಿ ಹಲವು ಬಾರಿ ಇರಿದು ಬರ್ಬರವಾಗಿ ಹತ್ಯೆ ಮಾಡಿ ಸ್ಥಳದಿಂದ ಪರಾರಿಯಾಗಿದ್ದಾನೆ.

ಸಾರ್ವಜನಿಕ ಸ್ಥಳದಲ್ಲೇ ನಡೆದ ಈ ಭೀಕರ ಕೃತ್ಯದಿಂದ ಬಸ್ ನಿಲ್ದಾಣದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಮಾಹಿತಿ ತಿಳಿದ ತಕ್ಷಣ ಬಂಟ್ವಾಳ ಉಪವಿಭಾಗದ ಹಿರಿಯ ಪೊಲೀಸ್ ಅಧಿಕಾರಿಗಳು, ನಗರ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಆರೋಪಿಯ ಪತ್ತೆಗೆ ವಿಶೇಷ ಶೋಧ ಕಾರ್ಯ ಆರಂಭಿಸಿದ್ದರು. ತನಿಖೆಯನ್ನು ಚುರುಕುಗೊಳಿಸಿದ್ದ ಪೊಲೀಸರು ಕೊನೆಗೂ ಆರೋಪಿ ಚೇತನ್‌ನ ಸುಳಿವು ಪತ್ತೆಹಚ್ಚಿ ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾದರು. ಆದರೆ ಬಂಧನದ ಭೀತಿಯಿಂದ ಆರೋಪಿ ಇಲಿ ಪಾಷಾಣ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾನೆ ಎನ್ನಲಾಗಿದೆ. ತಕ್ಷಣವೇ ಪೊಲೀಸರು ಆತನನ್ನು ಹತ್ತಿರದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಮುಂದುವರಿದಿದೆ. ಆಸ್ಪತ್ರೆಯ ಸುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ. ಆರೋಪಿಯ ಆರೋಗ್ಯ ಸ್ಥಿತಿ ಮೇಲ್ವಿಚಾರಣೆಯಲ್ಲಿದ್ದು, ಹತ್ಯೆಗೆ ನಿಖರ ಕಾರಣ ಏನು ಎಂಬುದರ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ಇನ್ನಷ್ಟು ಮಾಹಿತಿ ತನಿಖೆಯ ಬಳಿಕ ಹೊರಬೀಳುವ ಸಾಧ್ಯತೆಯಿದೆ.

## ತಮ್ಮನನ್ನು ಕೊಡಲಿಯಿಂದ ಕೊಲೆಗೈದ ಅಣ್ಣ

ಮೊಬೈಲ್‌ನಲ್ಲಿ ಯುವತಿಯೊಬ್ಬಳೊಂದಿಗೆ ಮಾತನಾಡಿದ್ದ ವಿಚಾರವಾಗಿ ಉಂಟಾದ ಜಗಳ ಕೊಲೆಯಲ್ಲಿ ಅಂತ್ಯಗೊಂಡ ಘಟನೆ ಸುರತ್ಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ಕಾಟಿಪಳ್ಳ ಗ್ರಾಮದ ಚೊಕ್ಕಬೆಟ್ಟು, ಕೃಷ್ಣಮಠ ರಸ್ತೆ ಸಮೀಪ ನಡೆದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಚೊಕ್ಕಬೆಟ್ಟಿನಲ್ಲಿರುವ ರೇಖಾ ಅವರ ಬಾಡಿಗೆ ಮನೆಯಲ್ಲಿ ಕಳೆದ ಐದು ವರ್ಷಗಳಿಂದ ಶಿವಲೀಲಾ ಹಾಗೂ ಆಕೆಯ ಇಬ್ಬರು ಪುತ್ರರಾದ ಸೋಮನಾಥ ಮತ್ತು ಮಲ್ಲಿಕಾರ್ಜುನ ವಾಸವಿದ್ದು, ಕೂಲಿ ಕೆಲಸ ಮಾಡಿಕೊಂಡಿದ್ದರು. ಮಲ್ಲಿಕಾರ್ಜುನ ಮೊಬೈಲ್‌ನಲ್ಲಿ ಯುವತಿಯೊಬ್ಬಳೊಂದಿಗೆ ಮಾತನಾಡುತ್ತಿದ್ದುದನ್ನು ಅಣ್ಣ ಸೋಮನಾಥ ವಿರೋಧಿಸಿದ್ದ. ಈ ವೇಳೆ ಇಬ್ಬರ ನಡುವೆ ವಾಗ್ವಾದ ನಡೆದಿದ್ದು, ಮಲ್ಲಿಕಾರ್ಜುನ ಅಣ್ಣನಿಗೆ ಬೈದಿದ್ದಾನೆ ಎನ್ನಲಾಗಿದೆ.

ಇದರಿಂದ ತೀವ್ರ ಆಕ್ರೋಶಗೊಂಡ ಸೋಮನಾಥ, ತಮ್ಮ ಮಲಗಿದ ಬಳಿಕ ಮನೆಯಲ್ಲಿದ್ದ ಕೊಡಲಿಯಿಂದ ತಲೆ ಹಾಗೂ ಮುಖಕ್ಕೆ ಮಾರಣಾಂತಿಕವಾಗಿ ಹಲ್ಲೆ ನಡೆಸಿ ಕೊಲೆಗೈದು ಪರಾರಿಯಾಗಿದ್ದಾನೆ. ಘಟನೆ ಕುರಿತು ಸುರತ್ಕಲ್ ಪೊಲೀಸ್ ಠಾಣೆಯಲ್ಲಿ BNS ಕಲಂ 103(1) ಅಡಿಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಕೈಗೊಳ್ಳಲಾಗಿದೆ. ಬಳಿಕ ಕೃಷ್ಣಾಪುರ ಮಠ ರಸ್ತೆ ಸಮೀಪದ ಪೊದೆಯಲ್ಲಿ ಅವಿತುಕೊಂಡಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದು, ವಿಚಾರಣೆ ವೇಳೆ ಕೃತ್ಯ ಎಸಗಿರುವುದನ್ನು ಒಪ್ಪಿಕೊಂಡಿದ್ದಾನೆ. ಬಂಧಿತ ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

## ಮ್ಯಾಟ್ರಿಮೋನಿ ಪರಿಚಯದ ಬಲೆ - ಉದ್ಯಮಿಗೆ ವಂಚನೆ

ಮ್ಯಾಟ್ರಿಮೋನಿ ಆ್ಯಪ್ ಮೂಲಕ ಪರಿಚಯವಾದ ಮಹಿಳೆಯೊಬ್ಬಳು ವಿವಿಧ ಕಾರಣಗಳನ್ನು ನೀಡಿ ಉದ್ಯಮಿಯೊಬ್ಬರಿಂದ 87.22 ಲಕ್ಷ ಹಣ ಪಡೆದು ವಂಚಿಸಿರುವ ಆರೋಪದಡಿ ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬೆಳ್ತಂಗಡಿ ನಿವಾಸಿಯಾಗಿರುವ ಫಿರ್ಯಾದಿದಾರರು ಉದ್ಯಮ ನಡೆಸುತ್ತಿದ್ದು, 2024ರ ಮೇ ತಿಂಗಳಲ್ಲಿ ಮ್ಯಾಟ್ರಿಮೋನಿ ಆ್ಯಪ್ ಮೂಲಕ 35 ವರ್ಷ ಪ್ರಾಯದ ಅನಿಷಾ ಪಾಲನ್ನ ಎಂಬಾಕೆಯ ಪರಿಚಯವಾಗಿತ್ತು. ಬಳಿಕ ಇಬ್ಬರೂ ಮೊಬೈಲ್ ಮೂಲಕ ಸಂಪರ್ಕದಲ್ಲಿದ್ದರು. 2024ರ ಸೆಪ್ಟೆಂಬರ್ 26ರಿಂದ 2025ರ ಜನವರಿ 20ರವರೆಗೆ ಆರೋಪಿತೆ ವಿವಿಧ ಕಾರಣಗಳನ್ನು ಮುಂದಿಟ್ಟು ಹಂತ ಹಂತವಾಗಿ ವಿವಿಧ ಬ್ಯಾಂಕ್ ಖಾತೆಗಳಿಗೆ ಒಟ್ಟು 87,22,710 ಹಣವನ್ನು ವರ್ಗಾಯಿಸಿಕೊಂಡಿದ್ದಾಳೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ನಂತರ ಆರೋಪಿತೆ ಮೊಬೈಲ್ ಸಂಪರ್ಕಕ್ಕೂ ಸಿಗದೆ, ಪಡೆದ ಹಣವನ್ನು ಹಿಂದಿರುಗಿಸದೆ ವಂಚನೆ ಎಸಗಿರುವುದಾಗಿ ಫಿರ್ಯಾದಿದಾರರು ದೂರು ನೀಡಿದ್ದು, ಈ ಸಂಬಂಧ ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ BNS–2023ರ ಕಲಂ 318(4) ಅಡಿಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಮುಂದುವರಿಸಲಾಗಿದೆ.

## ಮಂತ್ರಾಲಯ ರಸ್ತೆ ದುರಂತ - ಮಂಗಳೂರಿನ ಹಾಪ್‌ಕಾಮ್ಸ್ ಜನರಲ್ ಮ್ಯಾನೇಜರ್ ಮೃತ್ಯು

ಆಂಧ್ರಪ್ರದೇಶದ ಕರ್ನೂಲು ಜಿಲ್ಲೆಯ ಮಂತ್ರಾಲಯ ಸಮೀಪ ಮಂಗಳವಾರ ಮುಂಜಾನೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮಂಗಳೂರಿನ ಹಾಪ್‌ಕಾಮ್ಸ್‌ನ ಜನರಲ್ ಮ್ಯಾನೇಜರ್ 43 ವರ್ಷ ಪ್ರಾಯದ ರವಿ ಶೆಟ್ಟಿ (43) ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕಾರಿನಲ್ಲಿದ್ದ ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ. ರವಿ ಶೆಟ್ಟಿ ಅವರು ಸ್ನೇಹಿತರೊಂದಿಗೆ ಶ್ರೀ ರಾಘವೇಂದ್ರ ಸ್ವಾಮಿ ದೇವಸ್ಥಾನದಲ್ಲಿ ದರ್ಶನ ಪಡೆಯಲು ಮಂತ್ರಾಲಯಕ್ಕೆ ತೆರಳುತ್ತಿದ್ದರು. ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚರಿಸುತ್ತಿದ್ದ ವೇಳೆ ಚಾಲಕನ ನಿಯಂತ್ರಣ ತಪ್ಪಿದ ಕಾರು ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದ ಪರಿಣಾಮ ಅಪಘಾತ ಸಂಭವಿಸಿದೆ ಎಂದು ತಿಳಿದುಬಂದಿದೆ.

ದುರಂತದಲ್ಲಿ ರವಿ ಶೆಟ್ಟಿ ಸ್ಥಳದಲ್ಲೇ ಮೃತಪಟ್ಟಿದ್ದು, ಕಾರಿನಲ್ಲಿದ್ದ ಮಂಗಳೂರಿನ ಪ್ರದೀಪ್ ಆಳ್ವಾ, ಪುರುಷೋತ್ತಮ ಭಂಡಾರಿ ಹಾಗೂ ಸಿಎ ಸುದೇಶ್ ರೈ ಗಂಭೀರವಾಗಿ ಗಾಯಗೊಂಡಿದ್ದಾರೆ. ಸ್ಥಳೀಯರು ಕೂಡಲೇ ಗಾಯಾಳುಗಳನ್ನು ರಕ್ಷಿಸಿ ಎಮ್ಮಿಗನೂರಿನ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಮುಂದುವರಿದಿದೆ. ಮಾಹಿತಿ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಅಪಘಾತಕ್ಕೆ ನಿಖರ ಕಾರಣವೇನು ಎಂಬುದರ ಕುರಿತು ತನಿಖೆ ಮುಂದುವರಿದಿದೆ.

## ಮಲ್ಪೆ ಬಂದರಿನಲ್ಲಿ ದುರಂತ - ಮೀನುಗಾರನ ಶವ ಪತ್ತೆ

ಮೀನುಗಾರಿಕೆ ಕೆಲಸ ನಿರ್ವಹಿಸುತ್ತಿದ್ದ ವೇಳೆ ಕಾಲು ಜಾರಿ ಸಮುದ್ರಕ್ಕೆ ಬಿದ್ದು ನಾಪತ್ತೆಯಾಗಿದ್ದ ಮೀನುಗಾರನ ಮೃತದೇಹ ಎರಡು ದಿನಗಳ ಬಳಿಕ ಮಲ್ಪೆ ಮೀನುಗಾರಿಕೆ ಬಂದರಿನಲ್ಲಿ ಪತ್ತೆಯಾದ ಘಟನೆ ನಡೆದಿದೆ. ಮೃತರನ್ನು ಆಂಧ್ರಪ್ರದೇಶದ ಬೈನಾಪಲ್ಲಿ ನಿವಾಸಿ 40 ವರ್ಷ ಪ್ರಾಯದ ಬೊನ್ನ ಎಂದು ಗುರುತಿಸಲಾಗಿದೆ. ಅವರು ಮಲ್ಪೆ ಮೀನುಗಾರಿಕೆ ಬಂದರಿನಲ್ಲಿ ಮೀನುಗಾರಿಕೆ ಸಂಬಂಧಿತ ಕೆಲಸ ಮಾಡುತ್ತಿದ್ದರು. ಜುಲೈ 17ರಂದು ಬೆಳಗ್ಗೆ ಮಂಜಿ ದಕ್ಕೆಯಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಆಕಸ್ಮಿಕವಾಗಿ ಕಾಲು ಜಾರಿ ನೀರಿಗೆ ಬಿದ್ದ ಅವರು ನಾಪತ್ತೆಯಾಗಿದ್ದರು. ತಕ್ಷಣ ಸ್ಥಳೀಯರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ವ್ಯಾಪಕ ಶೋಧ ಕಾರ್ಯಾಚರಣೆ ನಡೆಸಿದ್ದರೂ ಪತ್ತೆಯಾಗಿರಲಿಲ್ಲ. ಆದರೆ ಜುಲೈ 19ರಂದು ಬೆಳಗ್ಗೆ ಅವರು ನೀರಿಗೆ ಬಿದ್ದಿದ್ದ ಸ್ಥಳದ ಸಮೀಪವೇ ಮೃತದೇಹ ತೇಲಿಬಂದಿದ್ದು, ಅದನ್ನು ಮೇಲಕ್ಕೆತ್ತಿ ಮರಣೋತ್ತರ ಪರೀಕ್ಷೆಗೆ ರವಾನಿಸಲಾಯಿತು. ಈ ಕುರಿತು ಮಲ್ಪೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಶುಂಠಿ ಚಹಾ ಅತಿಯಾದರೆ ಎಚ್ಚರ! ಮಿತಿಯಲ್ಲಿದ್ದರೆ ಮಾತ್ರ ಆರೋಗ್ಯ



ಆರೋಗ್ಯ ಡೆಸ್ಕ್: ಬೆಳಗ್ಗೆ ಎದ್ದ ತಕ್ಷಣ ಒಂದು ಕಪ್ ಬಿಸಿ ಬಿಸಿ ಶುಂಠಿ ಚಹಾ ಕುಡಿಯುವುದು ಅನೇಕರ ದಿನಚರಿಯ ಭಾಗವಾಗಿದೆ. ನೆಗಡಿ, ಕೆಮ್ಮು, ಅಜೀರ್ಣ ಸೇರಿದಂತೆ ಹಲವು ಸಮಸ್ಯೆಗಳಿಗೆ ಪರಿಹಾರ ನೀಡುವ ನೈಸರ್ಗಿಕ ಪಾನೀಯ ಎಂಬ ಕಾರಣಕ್ಕೆ ಕೆಲವರು ದಿನದಲ್ಲಿ ಹಲವು ಬಾರಿ ಶುಂಠಿ ಚಹಾವನ್ನು ಸೇವಿಸುತ್ತಾರೆ. ಆದರೆ, ಆರೋಗ್ಯಕ್ಕೆ ಲಾಭ ನೀಡುವ ಶುಂಠಿಯನ್ನೇ ಅತಿಯಾಗಿ ಸೇವಿಸಿದರೆ ದೇಹದ ಮೇಲೆ ಪ್ರತಿಕೂಲ ಪರಿಣಾಮಗಳು ಉಂಟಾಗಬಹುದು ಎಂದು ಆರೋಗ್ಯ ತಜ್ಞರು ಎಚ್ಚರಿಕೆ ನೀಡಿದ್ದಾರೆ.

ತಜ್ಞರ ಪ್ರಕಾರ, ಸಾಮಾನ್ಯವಾಗಿ ಶುಂಠಿ ಚಹಾವನ್ನು ಮಿತ ಪ್ರಮಾಣದಲ್ಲಿ ಸೇವಿಸುವುದು ಸುರಕ್ಷಿತ. ಆದರೆ, ದಿನವಿಡೀ ಚಹಾ, ಕಷಾಯ, ಅಡುಗೆ ಮತ್ತು ಮನೆಮದ್ದುಗಳ ಮೂಲಕ ಅತಿಯಾಗಿ ಶುಂಠಿಯನ್ನು ಸೇವಿಸಿದರೆ ದೇಹದಲ್ಲಿ ವಿವಿಧ ರೀತಿಯ ಅಸ್ವಸ್ಥತೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಇದೆ. ಆರೋಗ್ಯ ತಜ್ಞರ ಸಲಹೆಯಂತೆ ದಿನಕ್ಕೆ ಸುಮಾರು 4 ಗ್ರಾಂಗಿಂತ ಹೆಚ್ಚು ಶುಂಠಿಯನ್ನು ಸೇವಿಸದಿರುವುದು ಉತ್ತಮ.

ಅತಿಯಾದ ಶುಂಠಿ ಸೇವನೆಯಿಂದ ಕೆಲವರಲ್ಲಿ ಎದೆಯುರಿ, ಆಸಿಡಿಟಿ, ಹೊಟ್ಟೆಯಲ್ಲಿ ಉರಿ, ಹೊಟ್ಟೆ ಉಬ್ಬರ, ಅಜೀರ್ಣ ಹಾಗೂ ಅತಿಸಾರದಂತಹ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಇವು ಸಾಮಾನ್ಯವಾಗಿ ಶುಂಠಿಯಲ್ಲಿರುವ ಕಟು ಗುಣದಿಂದ ಉಂಟಾಗುವ ಲಕ್ಷಣಗಳಾಗಿದ್ದು, ಪ್ರಮಾಣ ಹೆಚ್ಚಾದಂತೆ ಸಮಸ್ಯೆಯೂ ಹೆಚ್ಚಾಗಬಹುದು ಎಂದು ತಜ್ಞರು ತಿಳಿಸಿದ್ದಾರೆ.

ಇದರ ಜೊತೆಗೆ, ಶುಂಠಿ ಚಹಾ ಕುಡಿದ ಬಳಿಕ ಚರ್ಮದ ಮೇಲೆ ದದ್ದುಗಳು, ತುರಿಕೆ, ಮುಖ ಅಥವಾ ಗಂಟಲು ಊದಿಕೊಳ್ಳುವುದು, ಉಸಿರಾಟದ ತೊಂದರೆ ಅಥವಾ ತೀವ್ರ ಹೊಟ್ಟೆ ನೋವು ಕಾಣಿಸಿಕೊಂಡರೆ ಅದನ್ನು ನಿರ್ಲಕ್ಷಿಸಬಾರದು. ಇವು ಅಲರ್ಜಿಯ ಲಕ್ಷಣಗಳಾಗಿರಬಹುದಾದ ಕಾರಣ ತಕ್ಷಣ ವೈದ್ಯರನ್ನು ಸಂಪರ್ಕಿಸುವುದು ಅಗತ್ಯ ಎಂದು ವೈದ್ಯರು ಸಲಹೆ ನೀಡಿದ್ದಾರೆ.

ಪಿತ್ತಕೋಶದಲ್ಲಿ ಕಲ್ಲು ಅಥವಾ ಇತರ ತೊಂದರೆ ಇರುವವರು ಶುಂಠಿ ಚಹಾವನ್ನು ನಿಯಮಿತವಾಗಿ ಸೇವಿಸುವ ಮೊದಲು ವೈದ್ಯರ ಸಲಹೆ ಪಡೆಯಬೇಕು. ಹಾಗೆಯೇ ಕಡಿಮೆ ರಕ್ತದೊತ್ತಡ ಇರುವವರು, ರಕ್ತದೊತ್ತಡ ನಿಯಂತ್ರಣದ ಔಷಧಿಗಳನ್ನು ಸೇವಿಸುತ್ತಿರುವವರು ಹಾಗೂ ರಕ್ತ ತೆಳುಗೊಳಿಸುವ ಔಷಧಿಗಳನ್ನು ತೆಗೆದುಕೊಳ್ಳುತ್ತಿರುವವರು ಶುಂಠಿಯನ್ನು ಅತಿಯಾಗಿ ಸೇವಿಸಬಾರದು ಎಂದು ಆರೋಗ್ಯ ತಜ್ಞರು ಎಚ್ಚರಿಸಿದ್ದಾರೆ.

ಅದಾಗ್ಯೂ, ಶುಂಠಿ ಆರೋಗ್ಯಕ್ಕೆ ಹಾನಿಕಾರಕ ಎಂಬರ್ಥವಲ್ಲ. ಮಿತ ಪ್ರಮಾಣದಲ್ಲಿ ಸೇವಿಸಿದರೆ ಇದು ಜೀರ್ಣಕ್ರಿಯೆ ಸುಧಾರಿಸಲು, ವಾಕರಿಕೆ ಮತ್ತು ವಾಂತಿ ಕಡಿಮೆ ಮಾಡಲು, ಹೊಟ್ಟೆಯ ಉಬ್ಬರ ನಿವಾರಿಸಲು ಹಾಗೂ ದೇಹದಲ್ಲಿನ ಉರಿಯೂತವನ್ನು ತಗ್ಗಿಸಲು ಸಹಕಾರಿಯಾಗುತ್ತದೆ. ಶುಂಠಿಯಲ್ಲಿರುವ 'ಜಿಂಜರಾಲ್' ಎಂಬ ಸಕ್ರಿಯ ಸಂಯುಕ್ತವು ಉರಿಯೂತ ನಿವಾರಕ ಮತ್ತು ಉತ್ಕರ್ಷಣ ನಿರೋಧಕ ಗುಣಗಳನ್ನು ಹೊಂದಿದೆ ಎಂದು ಹಲವು ಅಧ್ಯಯನಗಳು ತಿಳಿಸಿವೆ.

ಆರೋಗ್ಯ ತಜ್ಞರ ಅಭಿಪ್ರಾಯದಂತೆ, ಆರೋಗ್ಯವಂತ ವ್ಯಕ್ತಿಗಳು ದಿನಕ್ಕೆ ಒಂದು ಅಥವಾ ಎರಡು ಕಪ್ ಶುಂಠಿ ಚಹಾವನ್ನು ಮಿತ ಪ್ರಮಾಣದಲ್ಲಿ ಸೇವಿಸುವುದು ಸುರಕ್ಷಿತ. ಆದರೆ ಯಾವುದೇ ದೀರ್ಘಕಾಲದ ಕಾಯಿಲೆಗೆ ಔಷಧಿ ಸೇವಿಸುತ್ತಿರುವವರು, ಗರ್ಭಿಣಿಯರು ಅಥವಾ ವಿಶೇಷ ಆರೋಗ್ಯ ಸಮಸ್ಯೆ ಇರುವವರು ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡುವ ಮುನ್ನ ವೈದ್ಯರ ಸಲಹೆ ಪಡೆಯುವುದು ಉತ್ತಮ. ಮಿತ ಸೇವನೆಯೇ ಉತ್ತಮ ಆರೋಗ್ಯದ ಗುಟ್ಟು ಎಂಬುದನ್ನು ಮರೆಯಬಾರದು ಎಂದು ತಜ್ಞರು ಸಲಹೆ ನೀಡಿದ್ದಾರೆ.

## ಬೆಂಡೆಕಾಯಿ ನೀರು ಕುಡಿಯೋದರ ಆರೋಗ್ಯ ಲಾಭಗಳು

ಇತ್ತೀಚಿನ ದಿನಗಳಲ್ಲಿ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವವರ ಸಂಖ್ಯೆ ಹೆಚ್ಚುತ್ತಿದೆ. ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ನಿಂಬೆ ನೀರು, ಮೆಂತ್ಯೆ ನೀರು, ಚಿಯಾ ಸೀಡ್ಸ್ ನೀರು, ಹೆಸರುಕಾಳು ನೀರು ಕುಡಿಯುವ ಅಭ್ಯಾಸ ಹಲವರಲ್ಲಿದೆ. ಇದೇ ಸಾಲಿಗೆ ಈಗ ಬೆಂಡೆಕಾಯಿ ನೀರೂ ಸೇರ್ಪಡೆಯಾಗಿದೆ. ಪೌಷ್ಟಿಕಾಂಶಗಳಿಂದ ಸಮೃದ್ಧವಾಗಿರುವ ಬೆಂಡೆಕಾಯಿಯನ್ನು ಆಹಾರದಲ್ಲಿ ಬಳಸುವುದರ ಜೊತೆಗೆ ಅದರ ನೀರನ್ನು ಸೇವಿಸುವುದರಿಂದಲೂ ಹಲವು ಆರೋಗ್ಯ ಪ್ರಯೋಜನಗಳನ್ನು ಪಡೆಯಬಹುದು ಎಂದು ಆರೋಗ್ಯ ತಜ್ಞರು ಅಭಿಪ್ರಾಯಪಡುತ್ತಾರೆ. ಬೆಂಡೆಕಾಯಿಯಲ್ಲಿ ಫೈಬರ್, ವಿಟಮಿನ್ ಸಿ, ಫೋಲೇಟ್, ಮ್ಯಾಗ್ನೀಷಿಯಂ, ಪೊಟ್ಯಾಷಿಯಂ ಸೇರಿದಂತೆ ಹಲವು ಅಗತ್ಯ ಪೋಷಕಾಂಶಗಳು ಅಡಕವಾಗಿವೆ. ಈ ಪೋಷಕಾಂಶಗಳು ದೇಹದ ವಿವಿಧ ಅಂಗಾಂಗಗಳ ಕಾರ್ಯಕ್ಷಮತೆಯನ್ನು ಉತ್ತಮಗೊಳಿಸಲು ನೆರವಾಗುತ್ತವೆ. ವಿಶೇಷವಾಗಿ ರಾತ್ರಿ ಒಂದು ಅಥವಾ ಎರಡು ಬೆಂಡೆಕಾಯಿಗಳನ್ನು ಚೆನ್ನಾಗಿ ತೊಳೆದು ಉದ್ದವಾಗಿ ಕತ್ತರಿಸಿ ಒಂದು ಗ್ಲಾಸ್ ನೀರಿನಲ್ಲಿ ನೆನೆಸಿಟ್ಟು, ಬೆಳಗ್ಗೆ ಆ ನೀರನ್ನು ಖಾಲಿ ಹೊಟ್ಟೆಯಲ್ಲಿ ಕುಡಿಯುವುದರಿಂದ ಉತ್ತಮ ಫಲಿತಾಂಶ ದೊರೆಯಬಹುದು ಎನ್ನಲಾಗುತ್ತದೆ.

**ತೂಕ ಇಳಿಕೆಗೆ ಸಹಕಾರಿ :** ತೂಕ ಇಳಿಸಬೇಕೆಂಬ ಗುರಿ ಹೊಂದಿರುವವರಿಗೆ ಬೆಂಡೆಕಾಯಿ ನೀರು ಉತ್ತಮ ಆಯ್ಕೆಯಾಗಬಹುದು. ಇದರಲ್ಲಿರುವ ಹೆಚ್ಚಿನ ಫೈಬರ್ ಅಂಶವು ಹೊಟ್ಟೆಯನ್ನು ಹೆಚ್ಚು ಸಮಯ ತುಂಬಿರುವಂತೆ ಅನುಭವ ನೀಡುತ್ತದೆ. ಇದರಿಂದ ಅನಗತ್ಯ ಹಸಿವು ಕಡಿಮೆಯಾಗುವ ಜೊತೆಗೆ ಅತಿಯಾಗಿ ಆಹಾರ ಸೇವಿಸುವ ಅಭ್ಯಾಸವೂ ನಿಯಂತ್ರಣಕ್ಕೆ ಬರುತ್ತದೆ. ಜೊತೆಗೆ ಜೀರ್ಣಕ್ರಿಯೆ ಸುಧಾರಿಸುವ ಮೂಲಕ ದೇಹದ ಚಯಾಪಚಯ ಕ್ರಿಯೆಯನ್ನು ಚುರುಕುಗೊಳಿಸಲು ಸಹಕಾರಿಯಾಗುತ್ತದೆ.



**ಜೀರ್ಣಕ್ರಿಯೆ ಸುಧಾರಿಸಿ ಮಲಬದ್ಧತೆಗೆ ಪರಿಹಾರ :** ಬೆಂಡೆಕಾಯಿಯಲ್ಲಿರುವ ನೈಸರ್ಗಿಕ ಲೋಳೆಯ ಅಂಶ ಮತ್ತು ಫೈಬರ್ ಜೀರ್ಣಾಂಗದ ಆರೋಗ್ಯವನ್ನು ಕಾಪಾಡಲು ಪ್ರಮುಖ ಪಾತ್ರ ವಹಿಸುತ್ತದೆ. ಮಲಬದ್ಧತೆ, ಗ್ಯಾಸ್ಟ್ರಿಕ್, ಅಜೀರ್ಣದಂತಹ ಸಮಸ್ಯೆಗಳನ್ನು ಕಡಿಮೆ ಮಾಡಲು ನೆರವಾಗುತ್ತದೆ. ನಿಯಮಿತವಾಗಿ ಬೆಂಡೆಕಾಯಿ ನೀರು ಸೇವಿಸುವುದರಿಂದ ಕರುಳಿನ ಆರೋಗ್ಯವೂ ಉತ್ತಮವಾಗಿರಬಹುದು.

**ರಕ್ತದಲ್ಲಿನ ಸಕ್ಕರೆ ನಿಯಂತ್ರಣಕ್ಕೆ ನೆರವು :** ಬೆಂಡೆಕಾಯಿ ನೀರು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಕಾರಿಯಾಗಬಹುದು ಎಂದು ಕೆಲವು ಅಧ್ಯಯನಗಳು ಸೂಚಿಸಿವೆ. ಇದರಲ್ಲಿರುವ ಕರಗುವ ನಾರಿನ ಅಂಶವು ಗ್ಲೂಕೋಸ್ ಹೀರಿಕೊಳ್ಳುವ ವೇಗವನ್ನು ನಿಧಾನಗೊಳಿಸುವ ಮೂಲಕ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಸಮತೋಲನದಲ್ಲಿಡಲು ನೆರವಾಗುತ್ತದೆ. ಆದರೆ ಮಧುಮೇಹ ಇರುವವರು ವೈದ್ಯರ ಸಲಹೆಯೊಂದಿಗೆ ಮಾತ್ರ ಇದನ್ನು ತಮ್ಮ ದಿನಚರಿಯಲ್ಲಿ ಸೇರಿಸಿಕೊಳ್ಳುವುದು ಸೂಕ್ತ.

**ರೋಗನಿರೋಧಕ ಶಕ್ತಿ ಹೆಚ್ಚಿಸಲು ನೆರವು:** ವಿಟಮಿನ್ ಸಿ ಮತ್ತು ಆ್ಯಂಟಿ ಆಕ್ಸಿಡೆಂಟ್‌ಗಳ ಸಮೃದ್ಧಿಯಿರುವ ಬೆಂಡೆಕಾಯಿ ದೇಹದ ರೋಗನಿರೋಧಕ ಶಕ್ತಿಯನ್ನು ಬಲಪಡಿಸಲು ಸಹಕಾರಿಯಾಗಿದೆ. ಇದು ಸೋಂಕುಗಳ ವಿರುದ್ಧ ದೇಹದ ಪ್ರತಿರೋಧಕ ಶಕ್ತಿಯನ್ನು ಹೆಚ್ಚಿಸಲು ನೆರವಾಗಬಹುದು.

**ಚರ್ಮ ಮತ್ತು ಕೂದಲಿನ ಆರೋಗ್ಯಕ್ಕೂ ಲಾಭ:** ಬೆಂಡೆಕಾಯಿಯಲ್ಲಿರುವ ವಿಟಮಿನ್‌ಗಳು ಹಾಗೂ ಖನಿಜಾಂಶಗಳು ಚರ್ಮದ ಆರೋಗ್ಯವನ್ನು ಕಾಪಾಡಲು ನೆರವಾಗುತ್ತವೆ. ಚರ್ಮದ ಕಾಂತಿ ಹೆಚ್ಚಿಸಲು ಹಾಗೂ ಕೂದಲಿನ ಬೇರುಗಳನ್ನು ಬಲಪಡಿಸಲು ಸಹಕಾರಿ ಎಂದು ಹೇಳಲಾಗುತ್ತದೆ. ನಿಯಮಿತವಾಗಿ ಸೇವಿಸಿದರೆ ಕೂದಲು ಉದುರುವ ಸಮಸ್ಯೆ ಕಡಿಮೆಯಾಗಲು ಸಹ ನೆರವಾಗಬಹುದು.

**ಸೇವಿಸುವಾಗ ಇರಲಿ ಎಚ್ಚರ:** ಬೆಂಡೆಕಾಯಿ ನೀರು ಆರೋಗ್ಯಕ್ಕೆ ಪೂರಕವಾದರೂ ಇದನ್ನು ಯಾವುದೇ ಕಾಯಿಲೆಗೆ ಔಷಧಿಯಂತೆ ಪರಿಗಣಿಸಬಾರದು. ವಿಶೇಷವಾಗಿ ಮಧುಮೇಹ, ಮೂತ್ರಪಿಂಡ ಅಥವಾ ಇತರ ದೀರ್ಘಕಾಲದ ಆರೋಗ್ಯ ಸಮಸ್ಯೆಗಳಿರುವವರು ವೈದ್ಯರ ಸಲಹೆಯೊಂದಿಗೆ ಮಾತ್ರ ಸೇವಿಸುವುದು ಒಳಿತು. ಸಮತೋಲಿತ ಆಹಾರ, ನಿಯಮಿತ ವ್ಯಾಯಾಮ ಮತ್ತು ಆರೋಗ್ಯಕರ ಜೀವನಶೈಲಿಯೊಂದಿಗೆ ಬೆಂಡೆಕಾಯಿ ನೀರನ್ನು ಸೇರಿಸಿಕೊಂಡರೆ ಹೆಚ್ಚಿನ ಪ್ರಯೋಜನ ಪಡೆಯಬಹುದು.

ಅಡುಗೆ ಮನೆಯಲ್ಲೇ ಸುಲಭವಾಗಿ ದೊರೆಯುವ ಬೆಂಡೆಕಾಯಿ ಕೇವಲ ರುಚಿಕರ ತರಕಾರಿ ಮಾತ್ರವಲ್ಲ, ಅದರ ನೀರೂ ಆರೋಗ್ಯಕ್ಕೆ ಹಲವು ರೀತಿಯಲ್ಲಿ ನೆರವಾಗುವ ನೈಸರ್ಗಿಕ ಪಾನೀಯವಾಗಿದೆ. ಸರಿಯಾದ ರೀತಿಯಲ್ಲಿ ಹಾಗೂ ಮಿತವಾಗಿ ಸೇವಿಸಿದರೆ ದೇಹದ ಆರೋಗ್ಯ ಕಾಪಾಡಿಕೊಳ್ಳಲು ಇದು ಸಹಾಯಕವಾಗಬಹುದು.

## ಮಳೆಗಾಲದಲ್ಲಿ ತಲೆಹೊಟ್ಟು ಕಾಡುತ್ತಿದೆಯೇ? ತೆಂಗಿನ ಎಣ್ಣೆಯೊಂದಿಗೆ ಇದನ್ನು ಬೆರೆಸಿ ಹಚ್ಚಿದರೆ ಸಿಗಲಿದೆ ಪರಿಹಾರ..!

ಮಳೆಗಾಲ ಆರಂಭವಾಗುತ್ತಿದ್ದಂತೆ ಆರೋಗ್ಯದ ಜೊತೆಗೆ ಕೂದಲಿನ ಸಮಸ್ಯೆಗಳೂ ಹೆಚ್ಚಾಗುತ್ತವೆ. ಅವುಗಳಲ್ಲಿ ತಲೆಹೊಟ್ಟು ಸಾಮಾನ್ಯವಾಗಿ ಬಹುತೇಕರನ್ನು ಕಾಡುವ ಸಮಸ್ಯೆಯಾಗಿದೆ. ಗಾಳಿಯಲ್ಲಿನ ಹೆಚ್ಚಿದ ತೇವಾಂಶ, ಮಳೆಯಲ್ಲಿ ನೆನೆಯುವುದು, ಕೂದಲನ್ನು ಸರಿಯಾಗಿ ಒಣಗಿಸದೇ ಇರುವುದು, ತಲೆಚರ್ಮದಲ್ಲಿ ಬೆವರು ಹಾಗೂ ಎಣ್ಣೆ ಸಂಗ್ರಹವಾಗುವುದು ತಲೆಹೊಟ್ಟಿನ ಸಮಸ್ಯೆಯನ್ನು ಮತ್ತಷ್ಟು ಉಲ್ಬಣಗೊಳಿಸುತ್ತದೆ. ಆರಂಭದಲ್ಲೇ ಸೂಕ್ತ ಕಾಳಜಿ ವಹಿಸದಿದ್ದರೆ ತಲೆಹೊಟ್ಟು ತೀವ್ರ ತುರಿಕೆ, ಕೂದಲು ಉದುರುವಿಕೆ, ತಲೆಚರ್ಮದಲ್ಲಿ ಕೆಂಪಾಗುವಿಕೆ ಹಾಗೂ ಸೋಂಕಿನಂತಹ ಸಮಸ್ಯೆಗಳಿಗೆ ಕಾರಣವಾಗಬಹುದು.

ಮಳೆಗಾಲದಲ್ಲಿ ತಲೆಚರ್ಮದಲ್ಲಿ ತೇವಾಂಶ ಹೆಚ್ಚು ಕಾಲ ಉಳಿಯುವುದರಿಂದ ಶಿಲೀಂಧ್ರಗಳ ಬೆಳವಣಿಗೆಗೆ ಅನುಕೂಲಕರ ವಾತಾವರಣ ನಿರ್ಮಾಣವಾಗುತ್ತದೆ. ವಿಶೇಷವಾಗಿ ಮಳೆಯಲ್ಲಿ ನೆನೆದ ಬಳಿಕ ಕೂದಲನ್ನು ಒದ್ದೆಯಾಗಿಯೇ ಬಿಡುವುದು ಅಥವಾ ಕಟ್ಟಿಕೊಳ್ಳುವುದು ಸಮಸ್ಯೆಯನ್ನು ಇನ್ನಷ್ಟು ಹೆಚ್ಚಿಸುತ್ತದೆ. ತಲೆಚರ್ಮದಲ್ಲಿ ಬೆವರು, ಧೂಳು ಮತ್ತು ಹೆಚ್ಚುವರಿ ಎಣ್ಣೆ ಸೇರಿಕೊಂಡರೆ ಬ್ಯಾಕ್ಟೀರಿಯಾ ಹಾಗೂ ಶಿಲೀಂಧ್ರಗಳು ವೇಗವಾಗಿ ಬೆಳೆಯುವ ಸಾಧ್ಯತೆ ಹೆಚ್ಚಾಗುತ್ತದೆ. ಇದರಿಂದ ತಲೆಹೊಟ್ಟು ಮಾತ್ರವಲ್ಲದೆ ತಲೆಚರ್ಮದಲ್ಲಿ ಉರಿಯೂತ, ತುರಿಕೆ ಮತ್ತು ಕೂದಲು ದುರ್ಬಲಗೊಳ್ಳುವ ಸಮಸ್ಯೆಗಳೂ ಕಾಣಿಸಿಕೊಳ್ಳಬಹುದು. ತಲೆಹೊಟ್ಟಿನ ಸಮಸ್ಯೆ ನಿಯಂತ್ರಣದಲ್ಲಿಡಲು ವಾರಕ್ಕೆ ಎರಡರಿಂದ ಮೂರು ಬಾರಿ ಸೌಮ್ಯ ಅಥವಾ ಆ್ಯಂಟಿ-ಡ್ಯಾಂಡ್ರಫ್ ಶಾಂಪೂ ಬಳಸಿ ಕೂದಲನ್ನು ಸ್ವಚ್ಛಗೊಳಿಸುವುದು ಉತ್ತಮ. ಕೂದಲು ತೊಳೆದ ನಂತರ ಸಂಪೂರ್ಣವಾಗಿ ಒಣಗಿಸಬೇಕು. ಒದ್ದೆಯಾದ ಕೂದಲನ್ನು ಕಟ್ಟಿಕೊಳ್ಳುವುದು ಅಥವಾ ಹೆಚ್ಚು ಸಮಯ ಹಾಗೆಯೇ ಬಿಡುವುದು ಸೂಕ್ತವಲ್ಲ. ತಲೆಚರ್ಮವನ್ನು ಸದಾ ಸ್ವಚ್ಛವಾಗಿಟ್ಟುಕೊಂಡರೆ ಬೆವರು, ಧೂಳು ಮತ್ತು ಕೊಳೆ ಸಂಗ್ರಹವಾಗುವುದನ್ನು ತಡೆಯಬಹುದು. ಕೆಲವರಲ್ಲಿ ಅತಿಯಾಗಿ ಎಣ್ಣೆ ಹಚ್ಚುವುದರಿಂದಲೂ ತಲೆಹೊಟ್ಟು ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಅಗತ್ಯವಿದ್ದರೆ ಮಾತ್ರ ಮಿತ ಪ್ರಮಾಣದಲ್ಲಿ ಎಣ್ಣೆ ಬಳಸುವುದು ಒಳಿತು. ಜೊತೆಗೆ ಪ್ರೋಟೀನ್, ವಿಟಮಿನ್ ಬಿ, ವಿಟಮಿನ್ ಸಿ, ಜಿಂಕ್ ಹಾಗೂ ಒಮೆಗಾ-3 ಕೊಬ್ಬಿನಾಮ್ಲಗಳಿರುವ ಆಹಾರ ಸೇವಿಸುವುದರಿಂದ ತಲೆಚರ್ಮ ಮತ್ತು ಕೂದಲಿನ ಆರೋಗ್ಯ ಉತ್ತಮವಾಗಿರುತ್ತದೆ.



ಮನೆಮದ್ದಿನ ಮೂಲಕವೂ ತಲೆಹೊಟ್ಟಿನ ಸಮಸ್ಯೆಯನ್ನು ನಿಯಂತ್ರಿಸಲು ಪ್ರಯತ್ನಿಸಬಹುದು. ಅಲೋವೆರಾ ಜೆಲ್ ಅನ್ನು ತಲೆಚರ್ಮಕ್ಕೆ 20ರಿಂದ 30 ನಿಮಿಷಗಳ ಕಾಲ ಹಚ್ಚಿ ಬಳಿಕ ತೊಳೆದರೆ ತುರಿಕೆ ಕಡಿಮೆಯಾಗಲು ನೆರವಾಗಬಹುದು. ಅದೇ ರೀತಿ ತೆಂಗಿನ ಎಣ್ಣೆಗೆ ಎರಡು ಅಥವಾ ಮೂರು ಹನಿಗಳ ಟೀ ಟ್ರೀ ಆಯಿಲ್ ಬೆರೆಸಿ ತಲೆಚರ್ಮಕ್ಕೆ ಮೃದುವಾಗಿ ಮಸಾಜ್ ಮಾಡಿ ಸುಮಾರು ಅರ್ಧ ಗಂಟೆಯ ಬಳಿಕ ಕೂದಲು ತೊಳೆದರೆ ಶಿಲೀಂಧ್ರಗಳ ಬೆಳವಣಿಗೆಯನ್ನು ನಿಯಂತ್ರಿಸಲು ಸಹಕಾರಿಯಾಗಬಹುದು. ಆದರೆ ಟೀ ಟ್ರೀ ಆಯಿಲ್ ಬಳಸುವ ಮೊದಲು ಚರ್ಮದ ಸಣ್ಣ ಭಾಗದಲ್ಲಿ ಪರೀಕ್ಷೆ ನಡೆಸುವುದು ಉತ್ತಮ. ಮೊಸರನ್ನು ತಲೆಚರ್ಮಕ್ಕೆ ಹಚ್ಚಿ 20 ನಿಮಿಷಗಳ ಬಳಿಕ ತೊಳೆದರೂ ತಲೆಚರ್ಮಕ್ಕೆ ತಂಪು ನೀಡಿ ಆರಾಮ ನೀಡುವ ಜೊತೆಗೆ ತಲೆಹೊಟ್ಟು ಕಡಿಮೆಯಾಗಲು ನೆರವಾಗಬಹುದು.

ಆದರೆ ತಲೆಹೊಟ್ಟು ಹಲವು ವಾರಗಳಾದರೂ ಕಡಿಮೆಯಾಗದಿದ್ದರೆ, ತೀವ್ರ ತುರಿಕೆ, ತಲೆಚರ್ಮ ಕೆಂಪಾಗುವುದು, ಗಾಯಗಳು ಉಂಟಾಗುವುದು, ನೋವು ಕಾಣಿಸಿಕೊಳ್ಳುವುದು ಅಥವಾ ಅತಿಯಾದ ಕೂದಲು ಉದುರುವಿಕೆ ಕಂಡುಬಂದರೆ ಮನೆಮದ್ದಿನಲ್ಲೇ ಸಮಯ ಕಳೆಯದೆ ಚರ್ಮರೋಗ ತಜ್ಞರನ್ನು ಸಂಪರ್ಕಿಸುವುದು ಅತ್ಯಗತ್ಯ. ಸಮಯಕ್ಕೆ ಸರಿಯಾದ ಚಿಕಿತ್ಸೆ ಪಡೆದು ತಲೆಚರ್ಮದ ಆರೈಕೆ ಮಾಡಿದರೆ ಮಳೆಗಾಲದಲ್ಲಿಯೂ ತಲೆಹೊಟ್ಟಿನ ಸಮಸ್ಯೆಯಿಂದ ದೂರವಿದ್ದು ಕೂದಲಿನ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು.

## ಮಹಿಳೆಯರಲ್ಲೇ ಏಕೆ ಹೆಚ್ಚು ಕಾಡುತ್ತದೆ ಥೈರಾಯ್ಡ್?



ಇತ್ತೀಚಿನ ವರ್ಷಗಳಲ್ಲಿ ಥೈರಾಯ್ಡ್ ಸಮಸ್ಯೆಯಿಂದ ಬಳಲುತ್ತಿರುವವರ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿದೆ. ಅದರಲ್ಲೂ ಪುರುಷರಿಗಿಂತ ಮಹಿಳೆಯರಲ್ಲೇ ಈ ಸಮಸ್ಯೆ ಐದರಿಂದ ಎಂಟು ಪಟ್ಟು ಹೆಚ್ಚು ಕಂಡುಬರುತ್ತಿದೆ ಎಂದು ಆರೋಗ್ಯ ತಜ್ಞರು ತಿಳಿಸುತ್ತಿದ್ದಾರೆ. ದೇಹದ ಚಯಾಪಚಯ ಕ್ರಿಯೆಯನ್ನು ನಿಯಂತ್ರಿಸುವ ಪ್ರಮುಖ ಗ್ರಂಥಿಯಾದ ಥೈರಾಯ್ಡ್‌ನಲ್ಲಿ ಉಂಟಾಗುವ ವ್ಯತ್ಯಯವು ದೇಹದ ಹಲವು ಕಾರ್ಯಗಳ ಮೇಲೆ ನೇರ ಪರಿಣಾಮ ಬೀರುತ್ತದೆ. ಹಠಾತ್ ತೂಕ ಹೆಚ್ಚಾಗುವುದು ಅಥವಾ ಕಡಿಮೆಯಾಗುವುದು, ನಿರಂತರ ಆಯಾಸ, ಕೂದಲು ಉದುರುವುದು, ಚರ್ಮ ಒಣಗುವುದು, ಮಾಸಿಕ ಚಕ್ರದಲ್ಲಿ ಅಸಮತೋಲನ ಸೇರಿದಂತೆ ಹಲವು ಲಕ್ಷಣಗಳು ಕಾಣಿಸಿಕೊಂಡರೆ ಅದನ್ನು ಸಾಮಾನ್ಯ ಸಮಸ್ಯೆ ಎಂದು ನಿರ್ಲಕ್ಷಿಸದೆ ಥೈರಾಯ್ಡ್ ಪರೀಕ್ಷೆ ಮಾಡಿಸಿಕೊಳ್ಳುವುದು ಅತ್ಯಗತ್ಯ.

ಕತ್ತಿನ ಮುಂಭಾಗದಲ್ಲಿರುವ ಚಿಟ್ಟೆಯ ಆಕಾರದ ಥೈರಾಯ್ಡ್ ಗ್ರಂಥಿಯು ದೇಹದ ಬೆಳವಣಿಗೆ, ಚಯಾಪಚಯ ಕ್ರಿಯೆ, ದೇಹದ ಉಷ್ಣಾಂಶ ಹಾಗೂ ಶಕ್ತಿಯ ಉತ್ಪಾದನೆಯನ್ನು ನಿಯಂತ್ರಿಸುವ ಹಾರ್ಮೋನ್‌ಗಳನ್ನು ಉತ್ಪಾದಿಸುತ್ತದೆ. ಈ ಗ್ರಂಥಿಯ ಕಾರ್ಯದಲ್ಲಿ ವ್ಯತ್ಯಯ ಉಂಟಾದರೆ ದೇಹದ ವಿವಿಧ ಅಂಗಾಂಗಗಳ ಕಾರ್ಯಕ್ಷಮತೆಯ ಮೇಲೂ ಪರಿಣಾಮ ಬೀಳುತ್ತದೆ. ವಿಶೇಷವಾಗಿ ಮಹಿಳೆಯರಲ್ಲಿ ರೋಗನಿರೋಧಕ ವ್ಯವಸ್ಥೆಯ ಕಾರ್ಯ ವೈಖರಿಯಿಂದ ಹಶಿಮೋಟೋಸ್ ಥೈರಾಯಿಡಿಟಿಸ್ ಮತ್ತು ಗ್ರೇವ್ಸ್ ರೋಗದಂತಹ ಆಟೋಇಮ್ಯೂನ್ ಕಾಯಿಲೆಗಳು ಹೆಚ್ಚು ಕಾಣಿಸಿಕೊಳ್ಳುವ ಕಾರಣ ಥೈರಾಯ್ಡ್ ಸಮಸ್ಯೆಯ ಅಪಾಯವೂ ಹೆಚ್ಚಾಗುತ್ತದೆ ಎಂದು ತಜ್ಞರು ವಿವರಿಸುತ್ತಾರೆ. ಇದರ ಜೊತೆಗೆ ಗರ್ಭಧಾರಣೆ, ಹೆರಿಗೆಯ ನಂತರದ ಅವಧಿ ಹಾಗೂ ಮೆನೋಪಾಸ್ ಸಮಯದಲ್ಲಿ ದೇಹದಲ್ಲಿ ಸಂಭವಿಸುವ ಹಾರ್ಮೋನ್ ಬದಲಾವಣೆಗಳು ಥೈರಾಯ್ಡ್ ಗ್ರಂಥಿಯ ಕಾರ್ಯದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಹೆಚ್ಚಿರುತ್ತದೆ. ಕುಟುಂಬದಲ್ಲಿ ಯಾರಿಗಾದರೂ ಥೈರಾಯ್ಡ್ ಸಮಸ್ಯೆ ಇದ್ದರೆ ಆನುವಂಶಿಕ ಕಾರಣಗಳಿಂದಲೂ ಮಹಿಳೆಯರಲ್ಲಿ ಇದರ ಅಪಾಯ ಹೆಚ್ಚಾಗಬಹುದು. ಜೊತೆಗೆ ಅಯೋಡಿನ್ ಕೊರತೆ, ಅತಿಯಾದ ಮಾನಸಿಕ ಒತ್ತಡ, ಅಸಮತೋಲಿತ ಆಹಾರ ಪದ್ಧತಿ ಹಾಗೂ ಕೆಲವು ಔಷಧಿಗಳ ಬಳಕೆಯೂ ಥೈರಾಯ್ಡ್ ಸಮಸ್ಯೆಗೆ ಕಾರಣವಾಗಬಹುದು.

ಥೈರಾಯ್ಡ್ ಸಮಸ್ಯೆಯ ಆರಂಭಿಕ ಲಕ್ಷಣಗಳನ್ನು ಗುರುತಿಸುವುದು ಅತ್ಯಂತ ಮುಖ್ಯವಾಗಿದೆ. ನಿರಂತರ ಆಯಾಸ, ಹಠಾತ್ ತೂಕದಲ್ಲಿ ಏರಿಳಿತ, ಕೂದಲು ಉದುರುವುದು, ಚರ್ಮ ಒಣಗುವುದು, ಚಳಿಯನ್ನು ಹೆಚ್ಚು ಅನುಭವಿಸುವುದು ಅಥವಾ ಅತಿಯಾದ ಬೆವರು, ಹೃದಯ ಬಡಿತದಲ್ಲಿ ವ್ಯತ್ಯಾಸ, ಮಾಸಿಕ ಚಕ್ರದಲ್ಲಿ ಅಸಮತೋಲನ, ಗರ್ಭಧಾರಣೆಯಲ್ಲಿ ತೊಂದರೆ, ಮನಸ್ಥಿತಿಯಲ್ಲಿ ಆಗಾಗ ಬದಲಾವಣೆ, ಕುತ್ತಿಗೆಯ ಭಾಗದಲ್ಲಿ ಊತ ಕಾಣಿಸಿಕೊಳ್ಳುವುದು ಮುಂತಾದ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು. ವಯಸ್ಸಾದ ಮಹಿಳೆಯರಲ್ಲಿ ಈ ಲಕ್ಷಣಗಳನ್ನು ಮೆನೋಪಾಸ್‌ನ ಸಾಮಾನ್ಯ ಸಮಸ್ಯೆ ಎಂದು ತಪ್ಪಾಗಿ ಭಾವಿಸುವ ಸಾಧ್ಯತೆ ಇರುವುದರಿಂದ ಹೆಚ್ಚಿನ ಎಚ್ಚರಿಕೆ ಅಗತ್ಯ. ಥೈರಾಯ್ಡ್ ಸಮಸ್ಯೆಯನ್ನು ಆರಂಭದಲ್ಲೇ ಪತ್ತೆಹಚ್ಚಿದರೆ ಔಷಧಿ, ನಿಯಮಿತ ತಪಾಸಣೆ ಹಾಗೂ ಜೀವನಶೈಲಿಯಲ್ಲಿ ಕೆಲವು ಬದಲಾವಣೆಗಳ ಮೂಲಕ ಪರಿಣಾಮಕಾರಿಯಾಗಿ ನಿಯಂತ್ರಿಸಬಹುದು. ಪೌಷ್ಟಿಕಾಂಶಯುಕ್ತ ಆಹಾರ ಸೇವನೆ, ಅಯೋಡಿನ್ ಸಮರ್ಪಕ ಪ್ರಮಾಣದಲ್ಲಿ ದೊರೆಯುವಂತೆ ನೋಡಿಕೊಳ್ಳುವುದು, ನಿಯಮಿತ ವ್ಯಾಯಾಮ, ಮಾನಸಿಕ ಒತ್ತಡ ನಿಯಂತ್ರಣ ಹಾಗೂ ವೈದ್ಯರ ಸಲಹೆಯಂತೆ ಔಷಧಿಗಳನ್ನು ಸೇವಿಸುವುದು ಬಹಳ ಮುಖ್ಯ. ವಿಶೇಷವಾಗಿ 30 ವರ್ಷ ಮೇಲ್ಪಟ್ಟ ಮಹಿಳೆಯರು ಅಥವಾ ಕುಟುಂಬದಲ್ಲಿ ಥೈರಾಯ್ಡ್ ಸಮಸ್ಯೆಯ ಇತಿಹಾಸ ಇರುವವರು ಕಾಲಕಾಲಕ್ಕೆ ಥೈರಾಯ್ಡ್ ಪರೀಕ್ಷೆ ಮಾಡಿಸಿಕೊಳ್ಳುವುದು ಒಳಿತು ಎಂದು ಆರೋಗ್ಯ ತಜ್ಞರು ಸಲಹೆ ನೀಡಿದ್ದಾರೆ.

ಥೈರಾಯ್ಡ್ ಸಮಸ್ಯೆಯನ್ನು ಆರಂಭದಲ್ಲೇ ಗುರುತಿಸಿ ಚಿಕಿತ್ಸೆ ಪಡೆದರೆ ಆರೋಗ್ಯಕರ ಜೀವನ ನಡೆಸುವುದು ಸಾಧ್ಯ. ಆದ್ದರಿಂದ ದೇಹದಲ್ಲಿ ಕಾಣಿಸಿಕೊಳ್ಳುವ ಸಣ್ಣಪುಟ್ಟ ಬದಲಾವಣೆಗಳನ್ನೂ ನಿರ್ಲಕ್ಷಿಸದೆ ಸಮಯಕ್ಕೆ ಸರಿಯಾಗಿ ವೈದ್ಯಕೀಯ ಸಲಹೆ ಪಡೆಯುವುದು ಮಹಿಳೆಯರ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಪ್ರಮುಖ

## ಬೆಳಗ್ಗೆ ಈ 10 ಅಭ್ಯಾಸಗಳು ಅನಾರೋಗ್ಯದಿಂದ ದೂರವಿರಲು ಸಹಾಯ



ಇಂದಿನ ವೇಗದ ಜೀವನಶೈಲಿ, ಅನಿಯಮಿತ ಆಹಾರ ಪದ್ಧತಿ ಹಾಗೂ ಹೆಚ್ಚುತ್ತಿರುವ ಮಾನಸಿಕ ಒತ್ತಡದ ನಡುವೆ ಆರೋಗ್ಯ ಕಾಪಾಡಿಕೊಳ್ಳುವುದು ಸವಾಲಾಗಿ ಪರಿಣಮಿಸಿದೆ. ಆದರೆ ಬೆಳಗಿನ ಸಮಯವನ್ನು ಸರಿಯಾಗಿ ಬಳಸಿಕೊಂಡರೆ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಳ್ಳಬಹುದು ಎಂದು ಆರೋಗ್ಯ ತಜ್ಞರು ಸಲಹೆ ನೀಡುತ್ತಾರೆ. ಖ್ಯಾತ ವೈದ್ಯ ಡಾ. ಕಾರ್ತಿಕೇಯನ್ ಅವರ ಪ್ರಕಾರ, ಬೆಳಗ್ಗೆ ಎದ್ದ ತಕ್ಷಣ ಮೊಬೈಲ್ ಫೋನ್‌ನಲ್ಲಿ ಸಮಯ ಕಳೆಯುವ ಬದಲು ಕೆಲವು ಸರಳ ಅಭ್ಯಾಸಗಳನ್ನು ಜೀವನದ ಭಾಗವಾಗಿಸಿಕೊಂಡರೆ ದೇಹಕ್ಕೆ ಮಾತ್ರವಲ್ಲ, ಮನಸ್ಸಿಗೂ ಸಾಕಷ್ಟು ಪ್ರಯೋಜನವಾಗಲಿದೆ. ವೈದ್ಯರ ಪ್ರಕಾರ, ಬೆಳಗ್ಗೆ ಎದ್ದ ತಕ್ಷಣ ಒಂದು ಚಮಚ ಎಳ್ಳೆಣ್ಣೆಯನ್ನು ಬಾಯಿಯಲ್ಲಿ ಸುಮಾರು ಹತ್ತು ನಿಮಿಷಗಳ ಕಾಲ ತಿರುಗಿಸುವ ಆಯಿಲ್ ಪುಲ್ಲಿಂಗ್ ಅಭ್ಯಾಸವು ಬಾಯಿಯಲ್ಲಿರುವ ಕೆಲವು ಬ್ಯಾಕ್ಟೀರಿಯಾಗಳನ್ನು ಕಡಿಮೆ ಮಾಡಲು ಸಹಕಾರಿಯಾಗಬಹುದು. ನಂತರ ಕನಿಷ್ಠ ಎರಡು ನಿಮಿಷಗಳ ಕಾಲ ಹಲ್ಲುಗಳನ್ನು ಸರಿಯಾದ ವಿಧಾನದಲ್ಲಿ ಸ್ವಚ್ಛಗೊಳಿಸುವುದು ಅಗತ್ಯ. ಇದರ ಬಳಿಕ ಖಾಲಿ ಹೊಟ್ಟೆಯಲ್ಲಿ ಅರ್ಧ ಲೀಟರ್‌ನಷ್ಟು ಬೆಚ್ಚಗಿನ ನೀರು ಕುಡಿಯುವುದರಿಂದ ದೇಹದಲ್ಲಿ ನೀರಿನ ಸಮತೋಲನ ಕಾಪಾಡಿಕೊಳ್ಳಲು ನೆರವಾಗುತ್ತದೆ.

ದೈಹಿಕ ಆರೋಗ್ಯದಷ್ಟೇ ಮಾನಸಿಕ ಆರೋಗ್ಯಕ್ಕೂ ಬೆಳಗಿನ ಸಮಯ ಬಹಳ ಮಹತ್ವದ್ದಾಗಿದೆ. ಪ್ರತಿದಿನ ಜೀವನದಲ್ಲಿರುವ ಮೂರು ಒಳ್ಳೆಯ ವಿಷಯಗಳನ್ನು ನೆನೆದು ಕೃತಜ್ಞತೆ ವ್ಯಕ್ತಪಡಿಸುವ ಅಭ್ಯಾಸ ಬೆಳೆಸಿಕೊಂಡರೆ ಮನಸ್ಸಿನಲ್ಲಿ ಸಕಾರಾತ್ಮಕತೆ ಹೆಚ್ಚುತ್ತದೆ. ಜೊತೆಗೆ 4-7-8 ಉಸಿರಾಟ ವಿಧಾನ ಅನುಸರಿಸುವುದರಿಂದ ಆತಂಕ ಮತ್ತು ಮಾನಸಿಕ ಒತ್ತಡ ಕಡಿಮೆಯಾಗಲು ಸಹಾಯವಾಗಬಹುದು. ನಾಲ್ಕು ಸೆಕೆಂಡು ಉಸಿರೆಳೆದು, ಏಳು ಸೆಕೆಂಡು ಹಿಡಿದುಕೊಂಡು, ಎಂಟು ಸೆಕೆಂಡು ನಿಧಾನವಾಗಿ ಉಸಿರು ಬಿಡುವ ಈ ವಿಧಾನ ಮನಸ್ಸಿಗೆ ನೆಮ್ಮದಿ ನೀಡುತ್ತದೆ ಎಂದು ವೈದ್ಯರು ವಿವರಿಸುತ್ತಾರೆ. ಬೆಳಗಿನ ಮೃದುವಾದ ಸೂರ್ಯನ ಬೆಳಕಿನಲ್ಲಿ 10ರಿಂದ 15 ನಿಮಿಷ ಕಾಲ ನಿಲ್ಲುವುದರಿಂದ ದೇಹದಲ್ಲಿ ವಿಟಮಿನ್-ಡಿ ಉತ್ಪಾದನೆಗೆ ನೆರವಾಗುವುದರ ಜೊತೆಗೆ ದೇಹದ ಜೈವಿಕ ಗಡಿಯಾರ ಸಮತೋಲನದಲ್ಲಿರಲು ಸಹಕಾರಿ. ಕೆಲವರಿಗೆ ಒಂದು ಬೆಳ್ಳುಳ್ಳಿ ಕಳಿಯನ್ನು ಜಜ್ಜಿ ಹತ್ತು ನಿಮಿಷ ಬಿಟ್ಟು ನಂತರ ಸೇವಿಸುವುದು ಸಹ ಪ್ರಯೋಜನಕಾರಿಯಾಗಬಹುದು ಎಂದು ವೈದ್ಯರು ಹೇಳಿದರೂ, ಇದು ಎಲ್ಲರಿಗೂ ಅಗತ್ಯವಿಲ್ಲ ಹಾಗೂ ಪ್ರತಿದಿನ ಪಾಲಿಸಬೇಕಾದ ಅಭ್ಯಾಸವೂ ಅಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಆರೋಗ್ಯಕರ ದಿನಚರಿಯಲ್ಲಿ ವ್ಯಾಯಾಮಕ್ಕೂ ಪ್ರಮುಖ ಸ್ಥಾನವಿದೆ. ಪ್ರತಿದಿನ 30ರಿಂದ 40 ನಿಮಿಷಗಳ ಕಾಲ ವೇಗವಾಗಿ ನಡೆಯುವುದು ಹೃದಯದ ಆರೋಗ್ಯ, ತೂಕ ನಿಯಂತ್ರಣ ಹಾಗೂ ಮಾನಸಿಕ ನೆಮ್ಮದಿಗೆ ಸಹಕಾರಿಯಾಗುತ್ತದೆ. ಆದರೆ ಅತಿಯಾದ ವ್ಯಾಯಾಮ ಮಾಡುವ ಬದಲು ವಯಸ್ಸು ಮತ್ತು ಆರೋಗ್ಯಕ್ಕೆ ಅನುಗುಣವಾಗಿ ವ್ಯಾಯಾಮದ ಪ್ರಮಾಣ ನಿಗದಿಪಡಿಸಿಕೊಳ್ಳುವುದು ಉತ್ತಮ ಎಂದು ವೈದ್ಯರು ಸಲಹೆ ನೀಡಿದ್ದಾರೆ. ಬೆಳಗಿನ ಉಪಾಹಾರವೂ ಪೌಷ್ಟಿಕಾಂಶಯುಕ್ತವಾಗಿರಬೇಕು. ರಾತ್ರಿ ನೆನೆಸಿದ ಬಾದಾಮಿ, ಅರಿಶಿನ, ಕರಿಮೆಣಸು, ಬೆಳ್ಳುಳ್ಳಿ ಹಾಗೂ ಮೊಸರಿನಂತಹ ಆಹಾರಗಳನ್ನು ಮಿತವಾಗಿ ಆಹಾರದಲ್ಲಿ ಸೇರಿಸಿಕೊಳ್ಳುವುದರಿಂದ ದೇಹಕ್ಕೆ ಅಗತ್ಯವಾದ ಪೋಷಕಾಂಶಗಳು ದೊರೆಯುತ್ತವೆ. ಉಪಾಹಾರ ಮಾಡಿದ ತಕ್ಷಣ ಕುಳಿತುಕೊಳ್ಳುವ ಬದಲು ಸುಮಾರು 15ರಿಂದ 20 ನಿಮಿಷಗಳ ಕಾಲ ನಿಧಾನವಾಗಿ ನಡೆದರೆ ಜೀರ್ಣಕ್ರಿಯೆ ಉತ್ತಮಗೊಳ್ಳಲು ಹಾಗೂ ರಕ್ತದಲ್ಲಿನ ಸಕ್ಕರೆ ಮಟ್ಟ ನಿಯಂತ್ರಣದಲ್ಲಿರಲು ಸಹಾಯವಾಗಬಹುದು.

ಆದರೆ ವೈದ್ಯರು ಸೂಚಿಸಿರುವ ಈ ಅಭ್ಯಾಸಗಳು ಸಾಮಾನ್ಯ ಆರೋಗ್ಯಕರ ಜೀವನಶೈಲಿಯ ಭಾಗವಾಗಿದ್ದು, ಯಾವುದೇ ಕಾಯಿಲೆಗೆ ಚಿಕಿತ್ಸೆ ಅಥವಾ ಔಷಧಿಗೆ ಪರ್ಯಾಯವಲ್ಲ. ಈಗಾಗಲೇ ಮಧುಮೇಹ, ರಕ್ತದೊತ್ತಡ, ಹೃದಯ ಸಂಬಂಧಿ ಸಮಸ್ಯೆಗಳು ಅಥವಾ ಇತರ ದೀರ್ಘಕಾಲದ ಕಾಯಿಲೆಗಳಿರುವವರು ತಮ್ಮ ಆರೋಗ್ಯ ಸ್ಥಿತಿಗೆ ಅನುಗುಣವಾಗಿ ವೈದ್ಯರ ಸಲಹೆ ಪಡೆದು ಈ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವುದು ಸೂಕ್ತ. ಒಟ್ಟಾರೆ, ಬೆಳಗಿನ ಕೆಲವೇ ನಿಮಿಷಗಳನ್ನು ಆರೋಗ್ಯಕ್ಕಾಗಿ ಮೀಸಲಿಟ್ಟರೆ ದೈಹಿಕ ಸಾಮರ್ಥ್ಯ, ಮಾನಸಿಕ ನೆಮ್ಮದಿ ಹಾಗೂ ದಿನವಿಡೀ ಚೈತನ್ಯದಿಂದ ಇರಲು ನೆರವಾಗುತ್ತದೆ. ಸಣ್ಣ ಸಣ್ಣ ಆರೋಗ್ಯಕರ ಅಭ್ಯಾಸಗಳೇ ದೀರ್ಘಕಾಲದ ಉತ್ತಮ ಆರೋಗ್ಯಕ್ಕೆ ಭದ್ರ ಬುನಾದಿಯಾಗಬಹುದು ಎಂದು ಆರೋಗ್ಯ ತಜ್ಞರು ಸಲಹೆ ನೀಡಿದ್ದಾರೆ.

## Saint Agnes PU College Showcases Talent and Innovation at Annual Intra-Collegiate Fest 2026

Saint Agnes PU College came alive with enthusiasm, creativity, and youthful energy as it hosted its much-awaited Annual Intra-Collegiate Fest – Eureka, Comclave & Humaniscope 2026. The event brought together students from the Science, Commerce, and Arts streams, transforming the campus into a vibrant platform celebrating talent, innovation, teamwork, and academic excellence. The fest commenced with an inaugural ceremony presided over by Shabnam, PTA Vice President of the college, as the Chief Guest. In her inspiring address, she highlighted the importance of creativity, talent, and active participation in shaping students' personalities. She encouraged senior students to lead by example by showcasing their skills and motivating juniors to participate confidently. She also emphasized that such events provide valuable opportunities to nurture innovation, leadership, and self-confidence. The inaugural programme was compered by Sweedel and Deepali, while Thanmay, Arts Secretary, welcomed the gathering. Yuthika, Science Secretary, proposed the vote of thanks. The fest featured an exciting array of competitions that showcased students' creativity, analytical thinking, and artistic abilities. PressCon tested participants' confidence and communication skills, while BioToons brought biology concepts to life through creative cartoons and role-play. Enigma challenged students with an adventurous treasure hunt requiring teamwork and problem-solving, and Tessellate blended mathematics with art through stunning geometric creations.Creative excellence continued with Editrix, which highlighted editing and design skills, and Coco Create, where coconut shells were transformed into innovative decorative pieces through upcycling. Brand Blitz showcased entrepreneurial creativity through advertising concepts, while Beats Battle and Abhinaya enthralled the audience with energetic dance performances and expressive dance dramas. One of the major attractions was Periodica, a unique chemistry element-themed fashion show that seamlessly combined science, fashion, and creativity.Adding to the festive spirit, th e College Cabinet organized a variety of spot games, ensuring enthusiastic participation from the audience throughout the event. The fest was meticulously coordinated under the guidance of the convenors Olivia Patrao, Head of the Department of Humanities; Shubhavani, Head of the Department of Computer Science; and Chrystle Almeida, Head of the Department of Statistics. The celebrations concluded with a colourful valedictory ceremony compered by Princia Dsouza, while Fathima Alzaheera delivered the vote of thanks. Addressing the gathering, Sr Norine Dsouza, Principal of Saint Agnes PU College, congratulated all participants and appreciated the enthusiastic involvement of students and staff. She reminded students that true success comes through teamwork and collaboration and expressed pride in the spirit displayed throughout the festival.The championship results added excitement to the closing ceremony. In Eureka, the Overall Championship was jointly won by I PCMB/E/S and II PCMC, while II PCBH emerged as the runners-up. In Comclave, I CSBA secured the Overall Championship, with II CSBA and II CEBA–SEBA 'A' sharing the runners-up honours. In Humaniscope, II HEPP was crowned the Overall Champion. Blending innovation, intellect, creativity, and teamwork, the Annual Intra-Collegiate Fest 2026 proved to be a grand celebration of student excellence, leaving participants inspired and the audience with unforgettable memories.



## A New Era in Orthopaedics: Father Muller Performs South Kanara's First Robotic Hip Replacement



In a landmark achievement for healthcare in coastal Karnataka, Father Muller Medical College Hospital has successfully performed South Kanara's first robotic total hip replacement, ushering in a new era of precision-driven orthopaedic surgery and placing the region firmly on the map of advanced joint care. The milestone procedure brings cutting-edge robotic technology directly to patients in the region, sharply reducing the need to travel to distant metropolitan centres for world-class joint replacement surgery. The historic surgery was led by Dr Vivian Roshan Dalmeida, Joint Replacement Surgeon and Unit Chief, whose expertise anchored the entire procedure. He was supported by an accomplished surgical team comprising Dr Ashwin Kamath and Dr Alfred Lobo, along with the dedicated residents of the unit. The anaesthesia team was expertly managed by Dr Kishen Shetty and Dr Ritesh Dcunha, ensuring a smooth and safe procedure, with Nurse Nishin playing a vital role in the operating theatre. Crucial to the success was the pre-operative optimisation of the patient by a multidisciplinary team of medical professionals, including Dr Glen Fernandes, Dr Pradeep Pereira and Dr Sudeep, whose careful preparation set the stage for an excellent outcome. Robotic hip replacement blends the surgeon's skill with advanced three-dimensional planning and real-time precision. The technology enables highly accurate implant positioning, superior restoration of joint mechanics, and personalised surgical planning tailored to each patient's unique anatomy — advantages that translate into better function, enhanced stability, and potentially faster recovery."The introduction of robotic joint replacement reflects our commitment to offering patients the very latest evidence-based technology, while never compromising on the highest standards of safety and clinical excellence," said Dr Dalmeida.This achievement is a natural extension of Father Muller's strength in orthopaedics. The hospital's Department of Orthopaedics is a full-fledged, comprehensive department offering specialised expertise across trauma, arthroscopy, spine surgery, and hand and microsurgery, under the able leadership of Dr Mrinal Shetty — making it one of the most complete orthopaedic units in the region. The landmark surgery was made possible by the vision and encouragement of the hospital management, headed by the Director, Rev. Fr Faustine Lucas Lobo, who fast-tracked the acquisition of the most sophisticated robotic system in joint replacement surgery — a decision that reflects the institution's unwavering commitment to bringing the future of medicine to the people of the region.With the successful completion of South Kanara's first robotic hip replacement, Father Muller Medical College Hospital has set a new benchmark in orthopaedic surgery — opening the door for countless patients to benefit from minimally invasive, precision-guided joint replacement, closer to home than ever before.

## Diocese of Mangalore Organises Study Session for Parish Lay Faithful Leaders; KETB Chairperson Shalet Pinto Felicitated

The Diocesan Lay Faithful Commission of the Diocese of Mangalore organised a comprehensive study session on the "Mission of the Parish Lay Faithful Commission" at the Sambhram Hall, Saint Anthony Charitable Institutions, Jeppu, Mangalore. The event, which brought together Parish lay leaders from across the diocese, focused on the diocesan pastoral plan, the ethical integration of Artificial Intelligence (AI) in ministry, and crucial civic awareness regarding the ongoing Special Intensive Revision (SIR) (SIR).During the session, Shalet Pinto, the newly appointed Chairperson of the Karnataka EcoTourism Board and an active laity leader from Kinnigoli Parish, was formally felicitated by the Bishop of Mangalore, Most Rev. Dr Peter Paul Saldanha. Acknowledging the honour, Shalet Pinto expressed gratitude for the foundational support she received from the commission throughout her career and pledged her continued support and guidance to the community from her new office.Earlier in the day, Rev. Fr J.B. Crasta, the Diocesan Secretary for the Commission for Lay Faithful, welcomed the gathering. Highlighting the objectives of the gathering, Very Rev. Fr Naveen Pinto, Diocesan Judicial Vicar and Diocesan Coordinator of Pastoral Commissions, delivered the introductory talk, providing an overview of the Diocesan Pastoral Plan and stressing the vital need for collaborative building within parish communities.The first technical session was conducted by Rev. Fr Anil Fernandes, Director of Canara Communication Centre, who spoke on applying Pope Leo XIV's teachings to the parish lay mission, specifically focusing on "AI with a Human Heart." Fr Fernandes provided practical insights and tips on safeguarding human values in a tech-driven world, urging lay leaders to maintain responsible awareness when utilizing AI and digital communication tools in their pastoral roles. The second session was led by Rev. Fr J.B. Crasta, who detailed the specific roles, duties, and responsibilities of the laity in executing the pastoral plan effectively. Addressing vital socio-civic matters, Melwin Rodrigues, Consultant for the Census of India, led an interactive Question and Answer session to clarify doubts regarding the ongoing SIR processes, equipping leaders to guide their respective parishes accurately. The study session concluded with a solemn Eucharistic celebration led by Bishop Peter Paul Saldanha. The Bishop urged the parish lay leaders to work selflessly for the community while staying informed about modern societal trends and administrative requirements like the SIR. He emphasized the need for responsible leadership to ensure that no individual or family in the community is left behind or excluded. The students of Saint Anthony Ashram led the introductory prayers and managed the event logistics. Rev. Fr J.B. Crasta proposed the vote of thanks, expressing gratitude to all the resource persons, organizers, and participants.



## Saint Aloysius University Installs `Students' Council for 2026–27'

Saint Aloysius (Deemed to be University), Mangaluru, held the Investiture Ceremony of its Students' Council for the academic year 2026–27 at the L.F. Rasquinha Hall, LCRI Block. Prof. Milos Lichner, SJ, Vice Chancellor of Trnava University, Slovakia, was the chief guest, while Rev. Fr Brian Pereira, SJ, Rector of Saint Aloysius Institutions, presided over the programme. Rev. Dr Praveen Martis, SJ, Vice Chancellor, Dr Ronald Nazareth, Registrar, Dr Anup Denzil Veigas, Chairperson of the Students' Council, Binni Chan, Assistant Chairperson, and the newly elected student leaders were present on the dais.Congratulating the newly elected office-bearers, Prof. Milos Lichner highlighted the five essential principles of effective leadership, encouraging students to lead with integrity, responsibility and vision. Addressing the gathering, Rev. Dr Praveen Martis, SJ said that leadership is a unique quality within every individual and urged the council members to cultivate strong values, work closely with the faculty and actively involve students in the university's academic and co-curricular activities. In his presidential address, Rev. Fr Brian Pereira, SJ remarked, "Leadership is not a position; it is a passion. Being part of the Students' Council is not a privilege but a responsibility. Be true leaders and role models who inspire others."The oath of office was administered by Rev. Dr Praveen Martis, SJ to Giselle Pearl Vas (II B.Tech.), who assumed office as the President. She, in turn, administered the oath to the other office-bearers, including Vice President Jeevan Dmello, Secretary Sathyaprasad G. Pai, Joint Secretary Rachel Maria Pais, Cultural Secretary Viveka M.S. Demelo E. Granjo, Sports Secretary Simone Dsouza, Academic Affairs Secretary Piyush Shenoy, Student Welfare Secretary Gratian Rovin Fernandes, Outreach and Social Responsibility Secretary Ajay Parkhe Dipak, Media, Communication and Public Relations Secretary Reon Vivian Veigas, Environment and Sustainability Secretary Zalifa Nassir, along with the Class Representatives and Association Secretaries.The dignitaries also released the Students' Council Directory 2026–27 during the ceremony. The event was attended by the Deans and Associate Deans of the various Schools of the University. Binni Chan introduced the chief guest, while Verina, a B.Com. student, compered the programme. Dr Anup Denzil Veigas welcomed the gathering, Giselle Pearl Vas outlined the Council's proposed initiatives for the year, and Jeevan Dmello, Vice President, proposed the vote of thanks.




## Eight-Year-Old Mangaluru Girl Becomes Published Author

Eight-year-old Scarlett Rodrigues, a budding young author from Mangaluru, launched her debut book, The Wonderful World of Scarlett, at the Infant Jesus Shrine, Bikarnakatte, coinciding with the Feast of Our Lady of Mount Carmel. Scarlett, a Class III student of Saint Theresa's School, Mangaluru, has captured hearts with her remarkable achievement of publishing a collection of original stories and poems at such a young age. She is the daughter of Shreesha and Noel Rodrigues of Kulshekar. Unlike many children who spend their holidays watching television or using mobile devices, Scarlett dedicated her time to reading and creative writing. Her love for books began at the age of one when her mother introduced her to storytelling through daily reading sessions. Since then, she has developed a deep interest in children's literature, reading works by celebrated authors such as Roald Dahl, Dr Seuss, Eric Litwin, James Dean, and Julia Donaldson, while also memorising poems by William Wordsworth and Edward Lear.Her passion for reading not only helped her excel in the Spell Bee examination but also inspired her to write her own stories and poems. The book was developed with guidance and encouragement from Excel – Institute of Excellence, where her creative abilities were nurtured. Releasing the book, Rev. Fr Stifan Perera, OCD, Director of the Infant Jesus Shrine, congratulated Scarlett and described her accomplishment as a source of inspiration for children and parents alike. "While many children spend their holidays in front of television screens or endlessly scrolling through mobile phones, Scarlett chose to read, imagine, and write. Her achievement proves that nurturing a love for reading from an early age can unlock extraordinary talent," he said. He also highlighted the vital role parents play in fostering creativity and developing a reading habit among children.The book launch held special significance as it formed part of the Shrine's Mount Carmel celebrations under the theme "Our Lady of Mount Carmel: A Mother for the Digital Generation." Scarlett's inspiring journey from an enthusiastic reader to a published author reflected the celebration's message of encouraging children to use technology responsibly while cultivating creativity, imagination, and a lifelong love for learning. Among those present were Rev. Fr Jocy Siddakatte, OCD, Editor of Naman Ballok Jesu, Scarlett's mother Shreesha Rodrigues, family members, and members of the Shrine community, who applauded the young author's outstanding achievement.



# In loving memory of our dear Mom



## Mercine Pinto

**W/o Late Jerome Pinto**

**Born: 24-05-1942 | Married: 02-05-1962 | Entered Eternal Rest: 15-07-2026**

No words can ever express the pain of losing you, Mom.
You were our greatest blessing, our strength, and the heart of our family.
Though you are no longer with us, your love lives forever in our hearts.
Every heartbeat reminds us of your endless love,
every tear speaks of how deeply we miss you.
Until we meet again, you will remain our guiding light,
our sweetest memory, and our forever love.
Forever Loved. Forever Missed. Forever in Our Hearts.

*A loving Tribute from*

**Sr Florine Pinto, Everest, Benedict, Vincent, Metilda, Cylwin, Melvin, Shanthi, Jyothi and Preethi, Sons-in-law, Daughters-in-law, Grandchildren and all Family Members.**

**SAINT JOSEPH CHURCH SOORIKUMERU BORIMAR**

*If not delivered please return To:*

ಕರಾವಳಿ ಸುದ್ದಿ
KARBIL/2015/62120 DAKSHINA KANNADA

Door Number 2-68/2B, Near Nithyadar Mansion, Mani Post & Village, Bantwala Taluku - 574 253. Mob.: 8431426747

PRGI No.: KARBIL/2015/62120
Post Without Prepayment License No.: SK/WPP/PTR/208/2026-28
Postal Regd No. : PTR/150/2026-28
MANGALORE RMS
Posted on 25th July 2026

Printed by SAINT JOSEPH PRINTERS Published by ROSHAN BONIFACE MARTIS on behalf of ROSHAN BONIFACE MARTIS, printed at Dakshina Kannada and published at Door Number 2-68/2B, Near NITHYADAR MANSION, MANI POST & VILLAGE, BANTWALA TALUKU, DAKSHINA KANNADA DISTRICT, KARNATAKA - 574 253 editor ROSHAN BONIFACE MARTIS.